# ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 1985

## ಪ್ರಕರಣಗಳ ಕ್ರಮ ಪಟ್ಟಿ

ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

**ಪ್ರಕರಣಗಳು:**

### ಅಧ್ಯಾಯ I

### ಪ್ರಾರಂಭಿಕ

1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.
2. ಪರಿಭಾಷೆಗಳು.

### ಅಧ್ಯಾಯ II

### ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ

3. ಪ್ರಾಧಿಕಾರದ ರಚನೆ ಮತ್ತು ನಿಗಮನ.
4. ಸದಸ್ಯರ ಪದಾವಧಿ ಮತ್ತು ಸೇವಾ ಷರತ್ತುಗಳು.
5. ಪ್ರಾಧಿಕಾರದ ಸಭೆಗಳು.
6. ಕಾರ್ಯಕಾರಿ ಸಮಿತಿ.
7. ಇತರ ಸಮಿತಿಗಳ ನೇಮಕಾತಿ.
8. ಅಧಿಕಾರಿಗಳು ಮತ್ತು ನೌಕರರು.

### ಅಧ್ಯಾಯ III

### ಪ್ರಾಧಿಕಾರದ ಅಧಿಕಾರಗಳು ಮತ್ತು ಪ್ರಕಾರ್ಯಗಳು

9. ಪ್ರಾಧಿಕಾರದ ಅಧಿಕಾರಗಳು ಮತ್ತು ಪ್ರಕಾರ್ಯಗಳು.
10. ಬೆಂಗಳೂರು ಮಹಾ ನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಅನುಮತಿಯಿಲ್ಲದೆ ಇತರ ಪ್ರಾಧಿಕಾರ ಅಥವಾ ವ್ಯಕ್ತಿಗಳು ಕೆಲವು ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳತಕ್ಕದ್ದಲ್ಲ.

### ಅಧ್ಯಾಯ IV

### ಹಣಕಾಸು, ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನೆ

11. ಪ್ರಾಧಿಕಾರದ ನಿಧಿ.
12. ಆಯವ್ಯಯ.
13. ವಾರ್ಷಿಕ ವರದಿ.
14. ಪ್ರಾಧಿಕಾರಕ್ಕೆ ಆರ್ಥಿಕ ಸಹಾಯ ಮತ್ತು ಸಾಲಗಳು.
15. ಸಾಲ ಪಡೆಯುವುದಕ್ಕೆ ಪ್ರಾಧಿಕಾರದ ಅಧಿಕಾರ.
16. ಲೆಕ್ಕ ಮತ್ತು ಲೆಕ್ಕ ಪರಿಶೋಧನೆ.

### ಅಧ್ಯಾಯ V

### ಸಂಕೀರ್ಣ

17. ಪ್ರವೇಶಾಧಿಕಾರಗಳು.
18. ಪ್ರಾಧಿಕಾರದಿಂದ ನಿರ್ದೇಶಗಳು.
19. ಮಹಾನಗರ ಆಯುಕ್ತನು ನಿಗಮ ಮುಂತಾದವುಗಳ ಸಭೆಗಳಿಗೆ ಹಾಜರಾಗುವುದು.
20. ಅಧಿನಿಯಮದ ಉಪಬಂಧಗಳ ಉಲ್ಲಂಘನೆಗೆ ದಂಡ.
21. ಕಂಪನಿಗಳಿಂದ ಅಪರಾಧಗಳು.
22. ವಸೂಲಾದ ಜುಲ್ಮಾನೆಗಳು ನಿಧಿಗೆ ಜಮೆಯಾಗಬೇಕು.
23. ಸದಸ್ಯರು ಮತ್ತು ಅಧಿಕಾರಿಗಳು ಸಾರ್ವಜನಿಕ ನೌಕರರಾಗಿರಬೇಕು.
24. ಸದ್ಭಾವನೆಯಿಂದ ಕೈಕೊಂಡ ಕ್ರಮಕ್ಕೆ ರಕ್ಷಣೆ.

25. ಪ್ರತ್ಯಾಯೋಜಿಸುವ ಅಧಿಕಾರ.
26. ಪುನರೀಕ್ಷಣೆ.
27. ಪ್ರಾಧಿಕಾರಕ್ಕೆ ನಿರ್ದೇಶನಗಳನ್ನು ನೀಡಲು ಸರ್ಕಾರದ ಅಧಿಕಾರ.
28. ಅಧಿನಿಯಮವು ಇತರ ಕಾನೂನುಗಳಿಗೆ ಅಧ್ಯಾರೋಹಿಯಾಗಿರಬೇಕು.
29. ನಿಯಮಗಳ ರಚನಾಧಿಕಾರ.
30. ವಿನಿಯಮಗಳು.
31. ಕರ್ನಾಟಕ ನಗರ ಮತ್ತು ಗ್ರಾಮೀಣ ಪ್ರದೇಶ ಯೋಜನಾ ಅಧಿನಿಯಮ, 1961ಕ್ಕೆ ತಿದ್ದುಪಡಿ.

****

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

I

**ಅಧಿನಿಯಮ 1985ರ ಸಂಖ್ಯೆ 39.-** ಭಾರತದಲ್ಲಿ ಐದನೆಯ ಅತಿ ದೊಡ್ಡದಾದ ಹಾಗೂ ಅತಿ ಶೀಘ್ರ ಗತಿಯಲ್ಲಿ ಬೆಳೆಯುತ್ತಿರುವ ನಗರವಾಗಿರುವ ಬೆಂಗಳೂರು ನಗರದ ಹಾಗೂ ಅದರ ಸುತ್ತಲ ಪ್ರದೇಶದ ವ್ಯವಸ್ಥಿತ ಮತ್ತು ಯೋಜಿತ ಬೆಳವಣಿಗೆ ಇರಬೇಕಾದುದು ಅಗತ್ಯ. ನಗರದಲ್ಲಿ ಹಾಗೂ ಅದರ ಸುತ್ತಲ ಪ್ರದೇಶದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಬೆಂಗಳೂರು ನಗರ ಪ್ರಾಧಿಕಾರ, ಬೆಂಗಳೂರು ನಗರ ನಿಗಮ, ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಲಿ, ಕರ್ನಾಟಕ ರಾಜ್ಯ ರಸ್ತೆಸಾರಿಗೆ ನಿಗಮ ಹಾಗೂ ರೈಲ್ವೆ ಮುಂತಾದ ವಿವಿಧ ಸಾರ್ವಜನಿಕ ಏಜೆನ್ಸಿಗಳಿವೆ. ಈ ವಿವಿಧ ಏಜೆನ್ಸಿಗಳ ಚಟುವಟಿಕೆಗಳನ್ನು ಸಮನ್ವಯಗೊಳಿಸುವುದು ಅವಶ್ಯ. ಇಡೀ ಬೆಂಗಳೂರು ಮಹಾನಗರ ಪ್ರದೇಶದ ಸರಿಯಾದ ಮತ್ತು ವ್ಯವಸ್ಥಿತ ಅಭಿವೃದ್ಧಿಯನ್ನು ಯೋಜಿಸುವ, ಸಮನ್ವಯಗೊಳಿಸುವ ಮತ್ತು ಮೇಲ್ವಿಚಾರಣೆ ನಡೆಸುವ ಜವಾಬ್ದಾರಿಯುಳ್ಳ ಬೆಂಗಳೂರು ಮಹಾ ನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ಎಂದು ಕರೆಯಲಾಗುವ ಒಂದು ಉನ್ನತ ಮಟ್ಟದ ನಿಕಾಯವನ್ನು ರಚಿಸುವುದು ಅವಶ್ಯವಾಗಿದೆ. ಆದ್ದರಿಂದ ವಿಧೇಯಕ.

(ಕರ್ನಾಟಕ ರಾಜ್ಯಪತ್ರ (ವಿಶೇಷ ಪತ್ರಿಕೆ) ಭಾಗ 4-2ಎ ದಿನಾಂಕ 30.03.1984 ಸಂಖ್ಯೆ 199)

II

**ಅಧಿನಿಯಮ 2005ರ ಸಂಖ್ಯೆ 8.-** ಬೆಂಗಳೂರು ಮಹಾನಗರ ಪಾಲಿಕೆ ಪ್ರದೇಶದಿಂದ ಕೋಲಾರ ಜಿಲ್ಲೆಯ ಮಾಲೂರು ತಾಲ್ಲೂಕನ್ನು ಬಿಟ್ಟುಬಿಡುವ ಮೂಲಕ ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿಯ ಅಧಿಕಾರ ವ್ಯಾಪ್ತಿಯನ್ನು ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳಿಗೆ ಸೀಮಿತಗೊಳಿಸುವ ಸಲುವಾಗಿ ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 1985ನ್ನು ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಲಾಗಿದೆ.

ಆದ್ದರಿಂದ ಈ ವಿಧೇಯಕ.

(2005ರ ವಿಧಾನಸಭೆಯ ವಿಧೇಯಕ ಸಂಖ್ಯೆ 1)

III

**2010ರ ಅಧಿನಿಯಮ ಸಂಖ್ಯೆ 16.-** ವಿಧಾನ ಸಭೆಯ ಮುಂದಿಡಬೇಕಾದ ಕಾಗದ ಪತ್ರಗಳ ಸಮಿತಿಯ ಶಿಫಾರಸ್ಸಿನ ಮೇರೆಗೆ ಪ್ರಾಧಿಕಾರದ ಪರಿಶೋಧಿತ ಲೆಕ್ಕಪತ್ರಗಳು ಮತ್ತು ಲೆಕ್ಕ ಪರಿಶೋಧಕರ ವರದಿಯನ್ನು ರಾಜ್ಯ ವಿಧಾನ ಮಂಡಲದ ಉಭಯ ಸದನಗಳ ಮುಂದೆ ಮಂಡಿಸುವುದಕ್ಕೆ ಉಪಬಂಧ ಕಲ್ಪಿಸಲು ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 1985ರ (1985ರ ಕರ್ನಾಟಕ ಅಧಿನಿಯಮ 39) 16ನೇ ಪ್ರಕರಣವನ್ನು ತಿದ್ದುಪಡಿ ಮಾಡುವುದು ಅವಶ್ಯವೆಂದು ಪರಿಗಣಿಸಲಾಗಿದೆ.

ಆದ್ದರಿಂದ ಈ ವಿಧೇಯಕ.

(2009ರ ವಿಧಾನಸಭೆಯ ವಿಧೇಯಕ ಸಂಖ್ಯೆ 1, ಕಡತ ಸಂಖ್ಯೆ: ಸಂವ್ಯಶಾಇ 8 ಶಾಸನ 2006)
(ಭಾರತದ ಸಂವಿಧಾನದ ಏಳನೆಯ ಅನುಸೂಚಿಯ ಎರಡನೇ ಪಟ್ಟಿಯ 5ನೇ ನಮೂದನೆಯ ಅಡಿಯಲ್ಲಿ ಬರುತ್ತದೆ.)

**IV**

**2017ರ ಅಧಿನಿಯಮ ಸಂಖ್ಯೆ 05.–** ಆಡಳಿತದ ಹಿತದೃಷ್ಟಿಯಿಂದ ಪ್ರಾಧಿಕಾರವನ್ನು ಪ್ರತಿನಿಧಿಸುವ ಕೆಲವು ಹುದ್ದೆಗಳ ಅಥವಾ ಪ್ರಾಧಿಕಾರಿಗಳ ಪದನಾಮಗಳನ್ನು ಬದಲಾಯಿಸುವುದಕ್ಕೆ ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 1985ನ್ನು (1985ರ ಕರ್ನಾಟಕ ಅಧಿನಿಯಮ 39) ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಿದೆ.

ಆದ್ದರಿಂದ ಈ ವಿಧೇಯಕ.

(2016ರ ವಿಧಾನಸಭೆಯ ವಿಧೇಯಕ ಸಂಖ್ಯೆ 33: ಕಡತ ಸಂಖ್ಯೆ:ಸಂವ್ಯಶಾಇ 29 ಶಾಸನ 2016)
(ಭಾರತ ಸಂವಿಧಾನದ 7ನೇ ಅನುಸೂಚಿಯ 2ನೇ ಪಟ್ಟಿಯ 5ನೆಯ ಹಾಗೂ 3ನೇ ಪಟ್ಟಿಯ 20ನೆಯ ನಮೂದನೆಯಡಿಯಲ್ಲಿ ಬರುತ್ತದೆ.)

- - -

## 1985ರ ಕರ್ನಾಟಕ ಅಧಿನಿಯಮ ಸಂಖ್ಯೆ 39

*(1985ರ ಅಕ್ಟೋಬರ್ 29ನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)*

## ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 1985

*(1985ರ ಅಕ್ಟೋಬರ್ 18ನೇ ದಿನಾಂಕದಂದು ರಾಜ್ಯಪಾಲರ ಅನುಮತಿ ಪಡೆಯಲಾಗಿದೆ)*

*(2005ರ 8, 2010ರ 16 ಹಾಗೂ 2017ರ 5ನೇ ಅಧಿನಿಯಮದಲ್ಲಿ ತಿದ್ದುಪಡಿಯಾದಂತೆ)*

ಬೆಂಗಳೂರು ಮಹಾನಗರ ಪ್ರದೇಶದ ಒಳಗಿರುವ ಕ್ಷೇತ್ರಗಳ ಸರಿಯಾದ ಮತ್ತು ಸುವ್ಯವಸ್ಥಿತ ಅಭಿವೃದ್ಧಿಯ ಯೋಜನೆ, ಸಮನ್ವಯ ಮತ್ತು ಮೇಲ್ವಿಚಾರಣೆಯ ಉದ್ದೇಶಕ್ಕಾಗಿ ಒಂದು ಪ್ರಾಧಿಕಾರವನ್ನು ಸ್ಥಾಪಿಸುವ ಮತ್ತು ಅದಕ್ಕೆ ಸಂಬಂಧಪಟ್ಟ ಇತರ ವಿಷಯಗಳ ಸಲುವಾಗಿ ಏರ್ಪಟ್ಟ ಒಂದು ಅಧಿನಿಯಮ.

ಬೆಂಗಳೂರು ಮಹಾನಗರ ಪ್ರದೇಶದ ಒಳಗಿರುವ ಕ್ಷೇತ್ರಗಳ ಸರಿಯಾದ ಮತ್ತು ಸುವ್ಯವಸ್ಥಿತ ಅಭಿವೃದ್ಧಿಯ ಯೋಜನೆ, ಸಮನ್ವಯ ಮತ್ತು ಮೇಲ್ವಿಚಾರಣೆಯ ಉದ್ದೇಶಕ್ಕಾಗಿ ಒಂದು ಪ್ರಾಧಿಕಾರವನ್ನು ಸ್ಥಾಪಿಸುವ ಮತ್ತು ಅದಕ್ಕೆ ಸಂಬಂಧಪಟ್ಟ ಇತರ ವಿಷಯಗಳ ಸಲುವಾಗಿ ಏರ್ಪಾಟು ಮಾಡುವುದು ಯುಕ್ತವಾಗಿರುವುದರಿಂದ;

ಇದು, ಭಾರತ ಗಣರಾಜ್ಯದ ಮೂವತ್ತಾರನೆಯ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಕೆಳಕಂಡಂತೆ ಅಧಿನಿಯಮಿತವಾಗಲಿ:-

### ಅಧ್ಯಾಯ I

### ಪ್ರಾರಂಭಿಕ

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.**-(1) ಈ ಅಧಿನಿಯಮವನ್ನು ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 1985 ಎಂದು ಕರೆಯತಕ್ಕದ್ದು.

(2) ಇದು, ರಾಜ್ಯ ಸರ್ಕಾರವು ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆ ಮೂಲಕ ಗೊತ್ತುಪಡಿಸಬಹುದಾದಂಥ [1][ದಿನಾಂಕದಂದು][1] ಜಾರಿಗೆ ಬರತಕ್ಕದ್ದು.

1. ಈ ಅಧಿನಿಯಮವು ಅಧಿಸೂಚನೆ ಸಂಖ್ಯೆ:ಹೆಚ್ ಯು ಡಿ 54 ಟಿಟಿಪಿ 86 ದಿ: 24.01.1986ರ ಮೂಲಕ ದಿ: 01.02.1986ರಿಂದ ಜಾರಿಗೆ ಬಂದಿದೆ.

**2. ಪರಿಭಾಷೆಗಳು.**-ಈ ಅಧಿನಿಯಮದಲ್ಲಿ, ಸಂದರ್ಭವು ಅನ್ಯಥಾ ಅಗತ್ಯ ಪಡಿಸಿದ ಹೊರತು,-

(ಎ) "ಪ್ರಾಧಿಕಾರ" ಎಂದರೆ, 3ನೇ ಪ್ರಕರಣದ ಅಡಿಯಲ್ಲಿ ರಚಿತವಾದ ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ;

(ಬಿ) "ಸೌಕರ್ಯಗಳು" ಎಂಬುದರಲ್ಲಿ, ರಸ್ತೆಗಳು, ಸೇತುವೆಗಳು, ಬೀದಿಗಳು, ಸಾರಿಗೆ, ದೀಪ ವ್ಯವಸ್ಥೆ, ನೀರು ಮತ್ತು ವಿದ್ಯುತ್ ಸರಬರಾಜು, ಒಳಚರಂಡಿ ವ್ಯವಸ್ಥೆ, ಚರಂಡಿ ವ್ಯವಸ್ಥೆ, ಲೋಕೋಪಯೋಗಿ ಕಾಮಗಾರಿಗಳು, ಖಾಲಿ ಜಾಗಗಳು, ಮನರಂಜನೆ ಮೈದಾನಗಳು, ಉದ್ಯಾನಗಳು ಮತ್ತು ಇತರ ಅನುಕೂಲಗಳು, ಸೇವೆಗಳು ಮತ್ತು ಪ್ರಯೋಜನಗಳು ಸೇರುತ್ತವೆ;

(ಸಿ) "ಬೆಂಗಳೂರು ಮಹಾನಗರ ಪ್ರದೇಶ" ಎಂದರೆ, ಬೆಂಗಳೂರು ಜಿಲ್ಲೆ ಮತ್ತು [1][ಬೆಂಗಳೂರು ಗ್ರಾಮಾಂತರ ಜಿಲ್ಲೆ][1] ಮತ್ತು ರಾಜ್ಯ ಸರ್ಕಾರವು ಆಗಿಂದಾಗ್ಗೆ ಅಧಿಸೂಚನೆಯ ಮೂಲಕ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸ್ಥಳಗಳನ್ನು ಒಳಗೊಂಡ ಪ್ರದೇಶ;

(ಡಿ) "ಅಧ್ಯಕ್ಷ" ಎಂದರೆ ಪ್ರಾಧಿಕಾರದ ಅಧ್ಯಕ್ಷ;

[2][(ಇ) "ನಿಗಮ" ಎಂದರೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ][2];

(ಎಫ್) "ಅಭಿವೃದ್ಧಿ" ಎಂಬುದು, ತನ್ನ ವ್ಯಾಕರಣ ವ್ಯತ್ಯಾಸಗಳೊಂದಿಗೆ ಕಟ್ಟಡ ನಿರ್ಮಾಣ, ಇಂಜನಿಯರಿಂಗ್ ಅಥವಾ ಯಾವುದೇ ಭೂಮಿಯಲ್ಲಿ ಅಥವಾ ಭೂಮಿಯ ಮೇಲೆ ಅಥವಾ ಭೂಮಿಯ ಕೆಳಗಿನ ಇತರ ಕಾರ್ಯಾಚರಣೆಗಳು ಅಥವಾ ಯಾವುದೇ ಕಟ್ಟಡದಲ್ಲಿ ಅಥವಾ ಭೂಮಿಯಲ್ಲಿ ಅಥವಾ ಯಾವುದೇ ಕಟ್ಟಡ ಅಥವಾ ಭೂಮಿಯ ಉಪಯೋಗದಲ್ಲಿ ಮಾಡುವ ಗಣನೀಯ ಬದಲಾವಣೆಗಳನ್ನು ಒಳಗೊಳ್ಳುತ್ತದೆ ಮತ್ತು ಇದರಲ್ಲಿ ಪುನರಭಿವೃದ್ಧಿ ಮತ್ತು ನೆಲ ವಿನ್ಯಾಸಗಳ ರೂಪಣ ಮತ್ತು ಸೌಕರ್ಯಗಳೂ ಸೇರಿದಂತೆ ಯಾವುದೇ ಭೂಮಿಯ ಉಪವಿಭಜನೆಗಳೂ ಸೇರುತ್ತವೆ;

(ಜಿ) "ಕಾರ್ಯಕಾರಿ ಸಮಿತಿ" ಎಂದರೆ, 6ನೇ ಪ್ರಕರಣದ ಅಡಿಯಲ್ಲಿ ರಚಿತವಾದ ಕಾರ್ಯಕಾರಿ ಸಮಿತಿ;

(ಎಚ್) "ನಿಧಿ" ಎಂದರೆ, ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ನಿಧಿ;

(ಐ) "ಭೂಮಿ" ಎಂಬುದರಲ್ಲಿ, ಭೂಮಿಯಿಂದ ಮತ್ತು ಭೂಮಿಗೆ ಸೇರಿಕೊಂಡಿರುವ ಅಥವಾ ಭೂಮಿಗೆ ಸೇರಿಕೊಂಡಿರುವ ಯಾವುದಕ್ಕಾದರೂ ಶಾಶ್ವತವಾಗಿ ಬಂಧಿತವಾದ ವಸ್ತುಗಳಿಂದ ಉದ್ಭವಿಸುವ ಪ್ರಯೋಜನಗಳು ಸೇರುತ್ತವೆ;

(ಜೆ) "ಸ್ಥಳೀಯ ಪ್ರಾಧಿಕಾರ" ಎಂದರೆ, ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಅಡಿಯಲ್ಲಿ ರಚಿತವಾದ ಅಥವಾ ಮುಂದುವರೆದಿರುವ [2][ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ][2], ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಲಿ, [2][ಕರ್ನಾಟಕ ವಿದ್ಯುತ್ ಸರಬರಾಜು ನಿಗಮ ನಿಯಮಿತ][2], ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಜಿಲ್ಲಾ ಪರಿಷತ್ತು, ಪುರಸಭಾ ಪರಿಷತ್ತು, [2][ಪಟ್ಟಣ ಪಂಚಾಯತಿ ಅಥವಾ ಗ್ರಾಮ ಪಂಚಾಯತಿ][2];

(ಕೆ)"ಸದಸ್ಯ" ಎಂದರೆ, ಪ್ರಾಧಿಕಾರದ ಒಬ್ಬ ಸದಸ್ಯ;

(ಎಲ್) "ಮಹಾನಗರ ಆಯುಕ್ತ" ಎಂದರೆ, 8ನೇ ಪ್ರಕರಣದ ಅಡಿಯಲ್ಲಿ ನೇಮಿತನಾದ ಮಹಾನಗರ ಆಯುಕ್ತ; ಮತ್ತು

(ಎಂ)"ವಿನಿಯಮ" ಎಂದರೆ, ಈ ಅಧಿನಿಯಮದ ಅಡಿಯಲ್ಲಿ ರಚಿಸಲಾದ ವಿನಿಯಮ.

1. 2005ರ ಅಧಿನಿಯಮ ಸಂಖ್ಯೆ 8ರ ಮೂಲಕ ದಿನಾಂಕ: 23.03.2005ರಿಂದ ಪ್ರತಿಯೋಜಿಸಲಾಗಿದೆ.
2. 2017ರ ಅಧಿನಿಯಮ ಸಂಖ್ಯೆ 05ರ ಮೂಲಕ ದಿನಾಂಕ: 04.01.2017ರಿಂದ ಪ್ರತಿಯೋಜಿಸಲಾಗಿದೆ.

## ಅಧ್ಯಾಯ II

## ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ

**3. ಪ್ರಾಧಿಕಾರದ ರಚನೆ ಮತ್ತು ನಿಗಮನ.-** (1) ಈ ಅಧಿನಿಯಮದ ಪ್ರಾರಂಭದ ದಿನಾಂಕದ ತರುವಾಯ, ಎಷ್ಟು ಬೇಗನೆ ಸಾಧ್ಯವೋ ಅಷ್ಟು ಬೇಗನೆ, ರಾಜ್ಯ ಸರ್ಕಾರವು, ಅಧಿಸೂಚನೆಯ ಮೂಲಕ, ಬೆಂಗಳೂರು ಮಹಾನಗರ ಪ್ರದೇಶಕ್ಕೆ, ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರವೆಂದು ಕರೆಯಲಾಗುವ ಒಂದು ಪ್ರಾಧಿಕಾರವನ್ನು ರಚಿಸತಕ್ಕದ್ದು.

(2) ಪ್ರಾಧಿಕಾರವು, ಚರ ಮತ್ತು ಸ್ಥಿರ ಸ್ವತ್ತುಗಳೆರಡನ್ನು ಈ ಅಧಿನಿಯಮದ ಉಪಬಂಧಗಳಿಗೊಳಪಟ್ಟು ಆರ್ಜಿಸುವ, ಧಾರಣ ಮಾಡುವ ಮತ್ತು ವಿಲೆ ಮಾಡುವ ಮತ್ತು ಕರಾರು ಮಾಡಿಕೊಳ್ಳುವ ಮತ್ತು ಸದರಿ ಹೆಸರಿನಿಂದ ದಾವೆ ಹೂಡುವ ಅಥವಾ ದಾವೆಗೆ ಗುರಿಯಾಗುವ ಅಧಿಕಾರವಿರುವ ನಿರಂತರ ಉತ್ತರಾಧಿಕಾರವನ್ನು ಮತ್ತು ಸಾಮಾನ್ಯ ಮೊಹರನ್ನು ಹೊಂದಿರುವ ಒಂದು ನಿಗಮಿತ ನಿಕಾಯವಾಗಿರತಕ್ಕದ್ದು.

(3) ಪ್ರಾಧಿಕಾರವು ಈ ಮುಂದಿನ ಸದಸ್ಯರುಗಳನ್ನು ಹೊಂದಿರತಕ್ಕದ್ದು, ಎಂದರೆ:-

(ಎ) ಕರ್ನಾಟಕದ ಮುಖ್ಯಮಂತ್ರಿ, ಅವರು ಅಧ್ಯಕ್ಷರಾಗಿರತಕ್ಕದ್ದು;

(ಬಿ) [1][ಬೆಂಗಳೂರು ಅಭಿವೃದ್ಧಿಯ][1] ಪ್ರಭಾರದಲ್ಲಿರುವ ಮಂತ್ರಿ ಅವರು ಉಪಾಧ್ಯಕ್ಷರಾಗಿರತಕ್ಕದ್ದು;

(ಸಿ) ಅಧ್ಯಕ್ಷ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ;

(ಡಿ) ಮೇಯರ್, [1][ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ][1];

(ಇ) ಕರ್ನಾಟಕ ಸರ್ಕಾರದ ಮುಖ್ಯ ಕಾರ್ಯದರ್ಶಿ;

[1][(ಎಫ್) ಪ್ರಾದೇಶಿಕ ಆಯುಕ್ತ, ಬೆಂಗಳೂರು ಪ್ರದೇಶ, ಬೆಂಗಳೂರು;

(ಜಿ) ಅಪರ ಮುಖ್ಯ ಕಾರ್ಯದರ್ಶಿ ಅಥವಾ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ, ಆರ್ಥಿಕ ಇಲಾಖೆ, ಕರ್ನಾಟಕ ಸರ್ಕಾರ;

(ಎಚ್) ಅಪರ ಮುಖ್ಯ ಕಾರ್ಯದರ್ಶಿ ಅಥವಾ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ, ವಸತಿ ಇಲಾಖೆ, ಕರ್ನಾಟಕ ಸರ್ಕಾರ;

(ಎಚ್-1) ಅಪರ ಮುಖ್ಯ ಕಾರ್ಯದರ್ಶಿ ಅಥವಾ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ಕರ್ನಾಟಕ ಸರ್ಕಾರ;

(ಐ) ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಕರ್ನಾಟಕ ಸರ್ಕಾರ;

(ಜೆ) ಅಪರ ಮುಖ್ಯ ಕಾರ್ಯದರ್ಶಿ ಅಥವಾ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆಗಳ ಇಲಾಖೆ, ಕರ್ನಾಟಕ ಸರ್ಕಾರ;][1]

(ಕೆ) ಅಧ್ಯಕ್ಷ, ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಲಿ;

(ಎಲ್) ಅಧ್ಯಕ್ಷ, ಕರ್ನಾಟಕ ಗೃಹ ನಿರ್ಮಾಣ ಮಂಡಲಿ;

[1][(ಎಂ) ಅಧ್ಯಕ್ಷ, ಕರ್ನಾಟಕ ಕೊಳಚೆ ಪ್ರದೇಶ ಅಭಿವೃದ್ಧಿ ಮಂಡಳಿ;

(ಎನ್) ಅಧ್ಯಕ್ಷ, ಕರ್ನಾಟಕ ವಿದ್ಯುತ್ ಸರಬರಾಜು ನಿಗಮ ನಿಯಮಿತ;

(ಎನ್-1) ಅಧ್ಯಕ್ಷ, ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ;

(ಎನ್-2) ಅಧ್ಯಕ್ಷ, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ;

(ಒ) ಅಧ್ಯಕ್ಷ, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ;

(ಪಿ) ನಿರ್ದೇಶಕ, ಪಟ್ಟಣ ಮತ್ತು ಗ್ರಾಮಾಂತರ ಯೋಜನೆ, ಕರ್ನಾಟಕ ಸರ್ಕಾರ;][1]

(ಕ್ಯು) ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಸಾಮಾನ್ಯ), ಕರ್ನಾಟಕ ಸರ್ಕಾರ;

(ಆರ್) [2][xxx][2];

(ಎಸ್) ಡಿವಿಷನಲ್ ರೈಲ್ವೆ ಮ್ಯಾನೇಜರ್, ದಕ್ಷಿಣ ರೈಲ್ವೆ, ಬೆಂಗಳೂರು (ಕೇಂದ್ರ ಸರ್ಕಾರದ ಸಮ್ಮತಿ ಪಡೆದು);

(ಟಿ) ಜನರಲ್ ಮ್ಯಾನೇಜರ್, ಬೆಂಗಳೂರು ದೂರವಾಣಿ, ಬೆಂಗಳೂರು (ಕೇಂದ್ರ ಸರ್ಕಾರದ ಸಮ್ಮತಿ ಪಡೆದು);

(ಯು) ಸರ್ಕಾರದಿಂದ ನೇಮಿತರಾದ, ಕಾರ್ಮಿಕರು, ಮಹಿಳೆಯರು ಮತ್ತು ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳನ್ನು ಪ್ರತಿನಿಧಿಸುವ ನಾಲ್ವರು ಸದಸ್ಯರು;

(ವಿ) ಸರ್ಕಾರದಿಂದ ನೇಮಿತರಾದ, ಬೆಂಗಳೂರು ಮಹಾನಗರ ಪ್ರದೇಶವನ್ನು ಪ್ರತಿನಿಧಿಸುವ, ಕರ್ನಾಟಕ ರಾಜ್ಯ ವಿಧಾನಮಂಡಲದ ನಾಲ್ವರು ಸದಸ್ಯರು;

(ಡಬ್ಲ್ಯು) ಸರ್ಕಾರದಿಂದ ನೇಮಿತರಾದ, ಬೆಂಗಳೂರು ಮಹಾನಗರ ಪ್ರದೇಶದಲ್ಲಿನ ಸ್ಥಳೀಯ ಪ್ರಾಧಿಕಾರಗಳನ್ನು ಪ್ರತಿನಿಧಿಸುವ ವ್ಯಕ್ತಿಗಳ ಪೈಕಿಯಿಂದ ನಾಲ್ವರು ಸದಸ್ಯರು;

(ಎಕ್ಸ್) ಮಹಾನಗರ ಆಯುಕ್ತ, ಅವರು ಸದಸ್ಯ ಕಾರ್ಯದರ್ಶಿಯಾಗಿರತಕ್ಕದ್ದು.

1. 2017ರ ಅಧಿನಿಯಮ ಸಂಖ್ಯೆ 05ರ ಮೂಲಕ ದಿನಾಂಕ: 04.01.2017ರಿಂದ ಪ್ರತಿಯೋಜಿಸಲಾಗಿದೆ.

2. 2017ರ ಅಧಿನಿಯಮ ಸಂಖ್ಯೆ 05ರ ಮೂಲಕ ದಿನಾಂಕ: 04.01.2017ರಿಂದ ಬಿಟ್ಟುಬಿಡಲಾಗಿದೆ.

**4. ಸದಸ್ಯರ ಪದಾವಧಿ ಮತ್ತು ಸೇವಾ ಷರತ್ತುಗಳು.-** (1) 3ನೇ ಪ್ರಕರಣದ (3)ನೇ ಉಪ-ಪ್ರಕರಣದ (ಯು), (ವಿ) ಮತ್ತು (ಡಬ್ಲ್ಯು) ಖಾಬುಗಳ ಅಡಿಯಲ್ಲಿ ನೇಮಿತರಾದ ಸದಸ್ಯರು, ರಾಜ್ಯ ಸರ್ಕಾರದ ಇಚ್ಛೆಗೆ ಒಳಪಟ್ಟು, ತಾವು ಪದಧಾರಣ ಮಾಡಿದ ದಿನಾಂಕದಿಂದ ಮೂರು ವರ್ಷಗಳ ಅವಧಿಯವರೆಗೆ ಪದದಲ್ಲಿರತಕ್ಕದ್ದು ಮತ್ತು ನಿಯಮಿಸಬಹುದಾದ ಅಂಥ ಷರತ್ತುಗಳ ಅಡಿಯಲ್ಲಿ ಮರು ನೇಮಕಾತಿಗೆ ಅರ್ಹರಾಗಿರತಕ್ಕದ್ದು.

(2) ಪದನಿಮಿತ್ತ ಸದಸ್ಯನಲ್ಲದ ಯಾವೊಬ್ಬ ಸದಸ್ಯನು, ತನ್ನ ಹಸ್ತಾಧೀನ ಲೇಖದಲ್ಲಿ ರಾಜ್ಯ ಸರ್ಕಾರವನ್ನು ಸಂಬೋಧಿಸಿ ತನ್ನ ಪದಕ್ಕೆ ರಾಜೀನಾಮೆ ನೀಡಬಹುದು.

(3) ಸದಸ್ಯನೊಬ್ಬನ ರಾಜೀನಾಮೆಯಿಂದ ಅಥವಾ ಅನ್ಯಥಾ ಉಂಟಾಗಿರುವ ಆಕಸ್ಮಿಕ ರಿಕ್ತತೆಯನ್ನು ರಾಜ್ಯ ಸರ್ಕಾರವು ನೇಮಕಾತಿ ಮಾಡುವ ಮೂಲಕ ಭರ್ತಿ ಮಾಡಬಹುದು ಮತ್ತು ಹಾಗೆ ನೇಮಿತರಾದ ವ್ಯಕ್ತಿಗಳು, ಯಾವ ಸದಸ್ಯನ ಸ್ಥಾನಕ್ಕೆ ಅವನು ನೇಮಿತನಾಗಿರುವನೋ ಅವನು ಅಧಿಕಾರ ಧಾರಣ ಮಾಡಿರಬಹುದಾಗಿದ್ದ ಉಳಿದ ಅವಧಿಯವರೆಗೆ ಅಧಿಕಾರ ಧಾರಣ ಮಾಡತಕ್ಕದ್ದು.

(4) ಪ್ರಾಧಿಕಾರದ ಅಥವಾ ಕಾರ್ಯಕಾರಿ ಸಮಿತಿಯ ಅಥವಾ ಇತರ ಯಾವುದೇ ಸಮಿತಿಯ ಯಾವುದೇ ಕೃತ್ಯವು ಅಥವಾ ವ್ಯವಹರಣೆಯು, ಸಂದರ್ಭಾನುಸಾರ, ಪ್ರಾಧಿಕಾರ, ಕಾರ್ಯಕಾರಿ ಸಮಿತಿ ಅಥವಾ ಇತರ ಯಾವುದೇ ಸಮಿತಿಯ ರಚನೆ ಅಥವಾ ಪುನರ್‌ರಚನೆಯಲ್ಲಿಯ ಯಾವುದೇ ರಿಕ್ತತೆ ಅಥವಾ ದೋಷದ ಕಾರಣ ಮಾತ್ರದಿಂದ ಅಥವಾ ಪ್ರಾಧಿಕಾರದ ರಚನೆ ಅಥವಾ ಪ್ರಕ್ರಿಯೆಯಲ್ಲಿ ಇರುವಂಥ ಪರಿಶೀಲನೆಯಲ್ಲಿರುವ ವಿಷಯದ ಗುಣಗಳಿಗೆ ಬಾಧೆಯುಂಟುಮಾಡದ ಯಾವುದೇ ದೋಷ ಅಥವಾ ಅಕ್ರಮದ ಕಾರಣ ಮಾತ್ರದಿಂದಲೇ ಅಮಾನ್ಯವಾಗತಕ್ಕದ್ದಲ್ಲ.

(5) ತಾನು ಸದಸ್ಯನಾಗಿರುವುದು ನಿಂತುಹೋಗುವ ಯಾವೊಬ್ಬ ವ್ಯಕ್ತಿಯು, ಸದಸ್ಯನಾಗಿ ಪುನರ್ನೇಮಕಾತಿಗೆ ಅರ್ಹನಾಗಿರತಕ್ಕದ್ದು.

(6) ಪ್ರಾಧಿಕಾರ, ಕಾರ್ಯಕಾರಿ ಸಮಿತಿ ಅಥವಾ ಇತರ ಯಾವುದೇ ಸಮಿತಿಯ ಸಭೆಗಳಿಗೆ ಹಾಜರಾಗುವುದಕ್ಕಾಗಿ ಪದನಿಮಿತ್ತ ಸದಸ್ಯರಲ್ಲದ ಸದಸ್ಯರಿಗೆ ಸಂದೇಯವಿರುವ ಉಪವೇಶನ ಶುಲ್ಕ ಮತ್ತು ಇತರ ಭತ್ಯಗಳು ನಿಯಮಿಸಬಹುದಾದಂತೆ ಇರತಕ್ಕದ್ದು.

**5. ಪ್ರಾಧಿಕಾರದ ಸಭೆಗಳು.–** (1) ಪ್ರಾಧಿಕಾರದ ಸಭೆಗಳನ್ನು, ಮಹಾನಗರ ಆಯುಕ್ತನು ಕರೆಯತಕ್ಕದ್ದು ಮತ್ತು ಸಾಮಾನ್ಯವಾಗಿ, ಕನಿಷ್ಠಪಕ್ಷ ಮೂರು ತಿಂಗಳಿಗೊಂದು ಬಾರಿ ಅಧ್ಯಕ್ಷನು ನಿರ್ಧರಿಸಬಹುದಾದ ಪ್ರಾಧಿಕಾರದ ಅಧಿಕಾರ ವ್ಯಾಪ್ತಿಯೊಳಗಿರುವಂಥ ಸ್ಥಳದಲ್ಲಿ ಮತ್ತು ಅಂಥ ಸಮಯದಲ್ಲಿ ಅದು ಸಭೆ ಸೇರತಕ್ಕದ್ದು.

(2) ಪ್ರಾಧಿಕಾರವು ತನ್ನ ಸಭೆಗಳ ಕಾರ್ಯಕಲಾಪಗಳಿಗೆ ಸಂಬಂಧಪಟ್ಟಂತೆ (ಸಭೆಗಳಲ್ಲಿಯ ಗಣಪೂರ್ತಿಯೂ ಸೇರಿದಂತೆ), ವಿನಿಯಮಗಳಿಂದ ನಿಯಮಿಸಬಹುದಾದಂಥ ಪ್ರಕ್ರಿಯೆಯ ನಿಯಮಗಳನ್ನು ಪಾಲಿಸತಕ್ಕದ್ದು.

(3) ಅಧ್ಯಕ್ಷ, ಅಥವಾ ಯಾವುದೇ ಕಾರಣದಿಂದ ಸಭೆಗೆ ಹಾಜರಾಗಲು ಅವನಿಗೆ ಅಸಾಧ್ಯವಾದರೆ, ಉಪಾಧ್ಯಕ್ಷ ಅಥವಾ ಯಾವುದೇ ಕಾರಣದಿಂದ ಸಭೆಗೆ ಹಾಜರಾಗಲು ಅವನಿಗೂ ಅಸಾಧ್ಯವಾದರೆ, ಸಭೆಯಲ್ಲಿ ಹಾಜರಿರುವ ಸದಸ್ಯರಿಂದ ಆಯ್ಕೆಗೊಂಡ ಇತರ ಯಾವೊಬ್ಬ ಸದಸ್ಯನು ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸತಕ್ಕದ್ದು.

(4) ಪ್ರಾಧಿಕಾರದ ಸಭೆಯ ಮುಂದೆ ಬರುವ ಎಲ್ಲ ಪ್ರಶ್ನೆಗಳನ್ನು ಹಾಜರಿರುವ ಮತ್ತು ಮತ ನೀಡುವ ಸದಸ್ಯರ ಬಹುಮತದಿಂದ ನಿರ್ಧರಿಸತಕ್ಕದ್ದು ಮತ್ತು ಮತಗಳು ಸಮಾನವಾಗಿದ್ದ ಸನ್ನಿವೇಶದಲ್ಲಿ, ಅಧ್ಯಕ್ಷ ಅಥವಾ ಅವನ ಗೈರುಹಾಜರಿಯಲ್ಲಿ, ಅಧ್ಯಕ್ಷತೆ ವಹಿಸಿರುವ ವ್ಯಕ್ತಿಯು, ಎರಡನೆಯ ಅಥವಾ ನಿರ್ಣಾಯಕ ಮತವನ್ನು ಹೊಂದಿರತಕ್ಕದ್ದು ಮತ್ತು ಚಲಾಯಿಸತಕ್ಕದ್ದು.

(5) ಸದಸ್ಯನು, ಪ್ರಾಧಿಕಾರದ ಅಥವಾ ಅದರ ಸಮಿತಿಯ ಯಾವುದೇ ಸಭೆಯಲ್ಲಿ ಅವನು ತಾನೇ ಸ್ವತಃ ಅಥವಾ ಪಾಲುದಾರನ ಮೂಲಕ ಪ್ರತ್ಯಕ್ಷವಾಗಿ ಅಥವಾ ಪರೋಕ್ಷವಾಗಿ ಯಾವುದೇ ಷೇರು ಅಥವಾ ಹಿತಾಸಕ್ತಿ ಹೊಂದಿರುವ ಯಾವುದೇ ವಿಷಯದ ಚರ್ಚೆಯಲ್ಲಿ ಭಾಗವಹಿಸತಕ್ಕದ್ದಲ್ಲ ಅಥವಾ ಮತ ನೀಡತಕ್ಕದ್ದಲ್ಲ.

**6. ಕಾರ್ಯಕಾರಿ ಸಮಿತಿ.–** (1) ಪ್ರಾಧಿಕಾರದ (ಕೆಳಕಂಡವರನ್ನು ಹೊಂದಿರುವ) ಒಂದು ಕಾರ್ಯಕಾರಿ ಸಮಿತಿಯಿರತಕ್ಕದ್ದು: –

(ಎ) [1][ಬೆಂಗಳೂರು ಅಭಿವೃದ್ಧಿಯ][1] ಪ್ರಭಾರದಲ್ಲಿರುವ ಮಂತ್ರಿ, ಅವರು ಅಧ್ಯಕ್ಷರಾಗಿರತಕ್ಕದ್ದು;

(ಬಿ) ಮಹಾನಗರ ಆಯುಕ್ತರು, ಅವರು ಉಪಾಧ್ಯಕ್ಷರಾಗಿರತಕ್ಕದ್ದು;

(ಸಿ) ಅಧ್ಯಕ್ಷ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ;

(ಡಿ) ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ;

[1][(ಇ) ಮೇಯರ್, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ;

(ಎಫ್) ಆಯುಕ್ತ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ;

(ಜಿ) ಅಪರ ಮುಖ್ಯ ಕಾರ್ಯದರ್ಶಿ ಅಥವಾ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ, ವಸತಿ ಇಲಾಖೆ, ಕರ್ನಾಟಕ ಸರ್ಕಾರ;

(ಜಿ–1) ಅಪರ ಮುಖ್ಯ ಕಾರ್ಯದರ್ಶಿ ಅಥವಾ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ಕರ್ನಾಟಕ ಸರ್ಕಾರ;

(ಎಚ್) ಅಪರ ಮುಖ್ಯ ಕಾರ್ಯದರ್ಶಿ ಅಥವಾ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ, ಆರ್ಥಿಕ ಇಲಾಖೆ, ಕರ್ನಾಟಕ ಸರ್ಕಾರ;

(ಐ) ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಕರ್ನಾಟಕ ಸರ್ಕಾರ;][1]

(ಜೆ) ಅಧ್ಯಕ್ಷ, ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಲಿ;

[1][(ಕೆ) ನಿರ್ದೇಶಕ, ಪಟ್ಟಣ ಮತ್ತು ಗ್ರಾಮಾಂತರ ಯೋಜನೆ, ಕರ್ನಾಟಕ ಸರ್ಕಾರ;

(ಎಲ್) ಪ್ರಾದೇಶಿಕ ಆಯುಕ್ತ, ಬೆಂಗಳೂರು ಪ್ರದೇಶ, ಬೆಂಗಳೂರು;][1]

(2) ಪ್ರಾಧಿಕಾರದ ಸಾಮಾನ್ಯ ಅಧೀಕ್ಷಣೆ ಮತ್ತು ನಿಯಂತ್ರಣಕ್ಕೊಳಪಟ್ಟು, ಪ್ರಾಧಿಕಾರದ ವ್ಯವಹಾರಗಳ ಆಡಳಿತವು ಕಾರ್ಯಕಾರಿ ಸಮಿತಿಯಲ್ಲಿ ನಿಹಿತವಾಗಿರತಕ್ಕದ್ದು.

(3) ನಿಯಮಗಳಿಗೆ ಮತ್ತು ಪ್ರಾಧಿಕಾರದ ನಿರ್ದೇಶಗಳಿಗೆ ಒಳಪಟ್ಟು, ಕಾರ್ಯಕಾರಿ ಸಮಿತಿಯು, ಪ್ರಾಧಿಕಾರವು ಚಲಾಯಿಸಬಹುದಾದ ಯಾವುದೇ ಅಧಿಕಾರವನ್ನು ಚಲಾಯಿಸಬಹುದು ಮತ್ತು ಪ್ರಾಧಿಕಾರದ ಮೂಲಕ ನಿರ್ವಹಿಸಬಹುದಾದ ಅಥವಾ ಮಾಡಬಹುದಾದ ಯಾವುದೇ ಕೃತ್ಯವನ್ನು ಅಥವಾ ಯಾವುದೇ ಕೆಲಸವನ್ನು ಕೈಗೊಳ್ಳಬಹುದು.

(4) ಕಾರ್ಯಕಾರಿ ಸಮಿತಿಯು ಅನುಸರಿಸಬೇಕಾದ ಪ್ರಕ್ರಿಯೆ ಮತ್ತು ಕಾರ್ಯಕಾರಿ ಸಮಿತಿಗೆ ಸಂಬಂಧಪಟ್ಟ ಇತರ ಎಲ್ಲ ವಿಷಯಗಳು, ವಿನಿಯಮಗಳ ಮೂಲಕ ನಿಯಮಿಸಬಹುದಾದಂತೆ ಇರತಕ್ಕದ್ದು.

1. 2017ರ ಅಧಿನಿಯಮ ಸಂಖ್ಯೆ 05ರ ಮೂಲಕ ದಿನಾಂಕ: 04.01.2017ರಿಂದ ಪ್ರತಿಯೋಜಿಸಲಾಗಿದೆ.

**7. ಇತರ ಸಮಿತಿಗಳ ನೇಮಕಾತಿ.–** (1) ಪ್ರಾಧಿಕಾರವು ಆಗಿಂದಾಗ್ಗೆ, ತಾನು ಸೂಕ್ತವೆಂದು ಪರಿಗಣಿಸಬಹುದಾದಂಥ ಸದಸ್ಯರನ್ನೊಳಗೊಂಡಿರುವ ಸಮಿತಿಗಳನ್ನು ನೇಮಿಸಬಹುದು ಮತ್ತು ಸರ್ಕಾರದ ಅನುಮತಿಯೊಂದಿಗೆ, ನಿಯಮಿಸಬಹುದಾದಂಥ ರೀತಿಯಲ್ಲಿ ಮತ್ತು ಅಂಥ ಅವಧಿಗೆ ಅಂಥ ಸಮಿತಿಯಲ್ಲಿ, ತಾನು ಬಯಸುವ ಸಹಾಯ ಅಥವಾ ಸಲಹೆಯನ್ನು ನೀಡಬಲ್ಲ ಯಾವೊಬ್ಬ ವ್ಯಕ್ತಿಯನ್ನು ಅಥವಾ ವ್ಯಕ್ತಿಗಳನ್ನು ಸಹವರ್ತಿಯಾಗಿ ಮಾಡಬಹುದು ಮತ್ತು ತನಿಖೆ ನಡೆಸಿ ವರದಿ ನೀಡಲು ಈ ಅಧಿನಿಯಮದ ಉದ್ದೇಶಗಳಿಗೆ ಸಂಬಂಧಪಟ್ಟ ಯಾವುದೇ ವಿಷಯವನ್ನು ಅಂಥ ಸಮಿತಿಗಳಿಗೆ ಕಳುಹಿಸಿಕೊಡಬಹುದು.

(2) (1)ನೇ ಉಪಪ್ರಕರಣದ ಅಡಿಯಲ್ಲಿ ನೇಮಿತವಾದ ಪ್ರತಿಯೊಂದು ಸಮಿತಿಯು, ಪ್ರಾಧಿಕಾರವು ಆಗಿಂದಾಗ್ಗೆ ನೀಡಬಹುದಾದ ಯಾವುವೇ ಆದೇಶಗಳಿಗನುಗುಣವಾಗಿ ವರ್ತಿಸತಕ್ಕದ್ದು ಮತ್ತು ಪ್ರಾಧಿಕಾರವು, ಹಾಗೆ ನೇಮಿತವಾದ ಸಮಿತಿಯ ರಚನೆಯನ್ನು ಯಾವುದೇ ಸಮಯದಲ್ಲಿ ಬದಲಾಯಿಸಬಹುದು ಅಥವಾ ಯಾವುದೇ ಅಂಥ ನೇಮಕಾತಿಯನ್ನು ರದ್ದುಪಡಿಸಬಹುದು. ಪ್ರಾಧಿಕಾರವು ಅಂಥ ಪ್ರತಿಯೊಂದು ಸಮಿತಿಯ ಅಧ್ಯಕ್ಷನೆಂದು ಸದಸ್ಯರಲ್ಲಿ ಒಬ್ಬನನ್ನು ನಾಮನಿರ್ದೇಶನ ಮಾಡತಕ್ಕದ್ದು.

(3) ಸಮಿತಿಗಳು ಅನುಸರಿಸಬೇಕಾದ ಪ್ರಕ್ರಿಯೆ ಮತ್ತು ಸಮಿತಿಗಳಿಗೆ ಸಂಬಂಧಪಟ್ಟ ಇತರ ಎಲ್ಲ ವಿಷಯಗಳು ವಿನಿಯಮಗಳಿಂದ ನಿಯಮಿಸಬಹುದಾದಂತೆ ಇರತಕ್ಕದ್ದು.

**8. ಅಧಿಕಾರಿಗಳು ಮತ್ತು ನೌಕರರು.–** ಮಹಾನಗರ ಆಯುಕ್ತನನ್ನು ರಾಜ್ಯ ಸರ್ಕಾರವು ನೇಮಿಸತಕ್ಕದ್ದು, ಅವನು ಪ್ರಾಧಿಕಾರದ ಪ್ರಧಾನ ಆಡಳಿತಗಾರ ಮತ್ತು ಕಾರ್ಯನಿರ್ವಹಣಾಧಿಕಾರಿಯಾಗಿರತಕ್ಕದ್ದು; ರಾಜ್ಯಸರ್ಕಾರವು, ಆದೇಶದ ಮೂಲಕ, ಆಗಿಂದಾಗ್ಗೆ, ಮಹಾ ನಗರ ಆಯುಕ್ತನ ವೇತನ ಮತ್ತು ಸೇವೆಯ ಇತರ ನಿಬಂಧನೆಗಳನ್ನು ಮತ್ತು ಷರತ್ತುಗಳನ್ನು ಹಾಗೂ ಅಧಿಕಾರಗಳನ್ನು ಮತ್ತು ಪ್ರಕಾರ್ಯಗಳನ್ನು ನಿರ್ಧರಿಸತಕ್ಕದ್ದು. ಅವನು ರಾಜ್ಯ ಸರ್ಕಾರವು ನಿರ್ಧರಿಸಬಹುದಾದಂತೆ ಮೂರು ವರ್ಷಗಳಿಗೆ ಮೀರದಂಥ ಅವಧಿಗೆ ನೇಮಿತನಾಗತಕ್ಕದ್ದು ಮತ್ತು ನೇಮಕಾತಿಯನ್ನು ಒಂದು ಬಾರಿಗೆ ಮೂರು ವರ್ಷಗಳಿಗೆ ಮೀರದಂಥ ಅವಧಿಗೆ ಆಗಿಂದಾಗ್ಗೆ ವಿಸ್ತರಿಸಬಹುದು.

(2) ರಾಜ್ಯ ಸರ್ಕಾರವು, ಒಬ್ಬ ಅಥವಾ ಹೆಚ್ಚು ಉಪ ಅಥವಾ ಸಹಾಯಕ ಮಹಾನಗರ ಆಯುಕ್ತರನ್ನು, ಒಬ್ಬ ಪಟ್ಟಣ ಯೋಜಕನನ್ನು, ಒಬ್ಬ ಕಾನೂನು ಅಧಿಕಾರಿಯನ್ನು ಮತ್ತು ಒಬ್ಬ ಲೆಕ್ಕಪತ್ರಾಧಿಕಾರಿಯನ್ನು ನೇಮಿಸಬಹುದು. ರಾಜ್ಯ ಸರ್ಕಾರವು, ಆದೇಶದ ಮೂಲಕ ಮಹಾನಗರ

ಉಪಆಯುಕ್ತ, ಮಹಾನಗರ ಸಹಾಯಕ ಆಯುಕ್ತ, ಪಟ್ಟಣ ಯೋಜಕ, ಕಾನೂನು ಅಧಿಕಾರಿ ಮತ್ತು ಲೆಕ್ಕ ಪತ್ರಾಧಿಕಾರಿಯ ವೇತನ ಮತ್ತು ಸೇವೆಯ ಇತರ ನಿಬಂಧನೆಗಳನ್ನು ಮತ್ತು ಷರತ್ತುಗಳನ್ನು ಆಗಿಂದಾಗ್ಗೆ ನಿರ್ಧರಿಸತಕ್ಕದ್ದು.

(3) ಪ್ರಾಧಿಕಾರವು ಆಗಿಂದಾಗ್ಗೆ, ಪ್ರಾಧಿಕಾರದ ಪ್ರಕಾರ್ಯಗಳನ್ನು ದಕ್ಷತೆಯಿಂದ ನೆರವೇರಿಸಲು ಅಗತ್ಯವಿರಬಹುದಾದಂಥ ಅಧಿಕಾರಿಗಳ ಮತ್ತು ನೌಕರರ ಹುದ್ದೆಗಳ ಸೃಜನೆಗೆ ಮಂಜೂರಾತಿ ನೀಡಬಹುದು. ಅಂಥ ಅಧಿಕಾರಿಗಳ ಮತ್ತು ನೌಕರರ ಸೇವಾಭರ್ತಿಯ, ನೇಮಕಾತಿಯ ಮತ್ತು ಸೇವೆಯ ಷರತ್ತುಗಳು ಮತ್ತು ಅಧಿಕಾರಗಳು ಮತ್ತು ಕರ್ತವ್ಯಗಳು ವಿನಿಯಮಗಳ ಮೂಲಕ ನಿರ್ಧರಿಸಬಹುದಾದಂತೆ ಇರತಕ್ಕದ್ದು:

ಪರಂತು, ಒಂದು ಸಾವಿರದ ಐನೂರು ರೂಪಾಯಿ ಮತ್ತು ಅದಕ್ಕಿಂತ ಮೇಲ್ಪಟ್ಟ ಕನಿಷ್ಠ ವೇತನದ ಹುದ್ದೆಯನ್ನು ಸರ್ಕಾರದ ಅನುಮೋದನೆಯಿಲ್ಲದೆ ಸೃಜಿಸತಕ್ಕದ್ದಲ್ಲ.

## ಅಧ್ಯಾಯ III

## ಪ್ರಾಧಿಕಾರದ ಅಧಿಕಾರಗಳು ಮತ್ತು ಪ್ರಕಾರ್ಯಗಳು

**9. ಪ್ರಾಧಿಕಾರದ ಅಧಿಕಾರಗಳು ಮತ್ತು ಪ್ರಕಾರ್ಯಗಳು.**- (1) ಈ ಅಧಿನಿಯಮದ ಉಪಬಂಧಗಳು ಮತ್ತು ಅದರ ಅಡಿಯಲ್ಲಿ ರಚಿಸಲಾದ ನಿಯಮಗಳಿಗೊಳಪಟ್ಟು ಪ್ರಾಧಿಕಾರದ ಪ್ರಕಾರ್ಯಗಳು ಈ ಮುಂದಿನಂತಿರತಕ್ಕದ್ದು: -

(i) ಬೆಂಗಳೂರು ಮಹಾನಗರ ಪ್ರದೇಶದ ಸಮೀಕ್ಷೆ ನಡೆಸುವುದು ಮತ್ತು ಹಾಗೆ ನಡೆಸಲಾದ ಸಮೀಕ್ಷೆಗಳ ಬಗ್ಗೆ ವರದಿಗಳನ್ನು ಸಿದ್ಧಪಡಿಸುವುದು;

(ii) ಬೆಂಗಳೂರು ಮಹಾನಗರ ಪ್ರದೇಶದ ಅಭಿವೃದ್ಧಿಗಾಗಿ ಒಂದು ರಚನಾ ವಿನ್ಯಾಸ ಯೋಜನೆಯನ್ನು ಸಿದ್ಧಪಡಿಸುವುದು;

(iii) ರಚನಾ ವಿನ್ಯಾಸ ಯೋಜನೆಯಲ್ಲಿ ಆಲೋಚಿಸಲಾಗಿರುವಂಥ ಕಾಮಗಾರಿಗಳು ಕಾರ್ಯಗತವಾಗುವಂತೆ ಮಾಡುವುದು;

(iv) ಬೆಂಗಳೂರು ಮಹಾನಗರ ಪ್ರದೇಶದ ರಚನಾ ವಿನ್ಯಾಸ ಯೋಜನೆಯನ್ನು ಕಾರ್ಯಗತಗೊಳಿಸಲು ಅಗತ್ಯವಿರುವಷ್ಟು ಸ್ಕೀಮುಗಳನ್ನು ರೂಪಿಸುವುದು;

(v) ಸದರಿ ಸ್ಕೀಮುಗಳಿಗನುಸಾರವಾಗಿ ಪಟ್ಟಣ ಯೋಜನಾ ಸ್ಕೀಮುಗಳ ಮತ್ತು ಬೆಂಗಳೂರು ಮಹಾನಗರ ಪ್ರದೇಶದ ಅಭಿವೃದ್ಧಿ ಕಾಮಗಾರಿಗಳ ಕಾರ್ಯನಿರ್ವಹಣೆಯನ್ನು ಸುನಿಶ್ಚಿತಗೊಳಿಸುವುದು ಮತ್ತು ಸಮನ್ವಯಗೊಳಿಸುವುದು,

(vi) ಬೆಂಗಳೂರು ಮಹಾನಗರ ಪ್ರದೇಶದ ಅಭಿವೃದ್ಧಿಯ ಸಲುವಾಗಿ ಯಾವುದೇ ಯೋಜನೆ ಅಥವಾ ಸ್ಕೀಮಿಗಾಗಿ ಹಣಕಾಸು ಸಂಗ್ರಹಿಸುವುದು ಮತ್ತು ಅಂಥ ಯೋಜನೆ ಅಥವಾ ಸ್ಕೀಮನ್ನು ಕಾರ್ಯಗತಗೊಳಿಸಲು ಪ್ರದೇಶದಲ್ಲಿರುವ ಸ್ಥಳೀಯ ಪ್ರಾಧಿಕಾರಗಳಿಗೆ ಸಹಾಯ ನೀಡುವುದು;

(vii) ಯಾವ ಉದ್ದೇಶಗಳಿಗಾಗಿ ಪ್ರಾಧಿಕಾರವನ್ನು ರಚಿಸಲಾಗಿದೆಯೋ ಆ ಉದ್ದೇಶಗಳ ಮುಂದುವರಿಕೆಗಾಗಿ, ಸರ್ಕಾರದಿಂದ ವಹಿಸಿಕೊಡಬಹುದಾದ ಅಥವಾ ಅದಕ್ಕೆ ಅವಶ್ಯವಿರುವ ಯಾವುವೇ ವಿಷಯಗಳಿಗೆ ಅಗತ್ಯವಿರಬಹುದಾದ ಅಥವಾ ಅದಕ್ಕೆ ಆನುಷಂಗಿಕವಾದ ಅಥವಾ ಸಹಾಯಕವಾದ ಇತರ ಅಂಥ ಕೃತ್ಯಗಳನ್ನು ಮತ್ತು ಕೆಲಸಗಳನ್ನು ಮಾಡುವುದು;

(viii) ಯಾವುದೇ ಸ್ಥಳೀಯ ಪ್ರಾಧಿಕಾರಕ್ಕೆ ಯಾವುದೇ ಅಭಿವೃದ್ಧಿ ಯೋಜನೆ ಅಥವಾ ನಗರ ಯೋಜನೆ ಸ್ಕೀಮುಗಳ ಕಾರ್ಯ ನಿರ್ವಹಣೆಯ ಕೆಲಸವನ್ನು ವಹಿಸಿಕೊಡುವುದು,

(ix) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಕರ್ನಾಟಕ ಕೈಗಾರಿಕಾ ಪ್ರದೇಶಗಳ ಅಭಿವೃದ್ಧಿ ಮಂಡಲಿ, ಬೆಂಗಳೂರು ನಗರ ನಿಗಮ, ಬೆಂಗಳೂರು ನೀರುಸರಬರಾಜು ಮತ್ತು ಒಳಚರಂಡಿ ಮಂಡಲಿ, [1][ಕರ್ನಾಟಕ ಕೊಳಚೆ ಪ್ರದೇಶ ಅಭಿವೃದ್ಧಿ ಮಂಡಲಿ, ಕರ್ನಾಟಕ ವಿದ್ಯುಚ್ಛಕ್ತಿ ಸರಬರಾಜು ನಿಗಮ ನಿಯಮಿತ ಮತ್ತು ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ][1] ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಮತ್ತು ಬೆಂಗಳೂರು ಮಹಾನಗರ ಪ್ರದೇಶದಲ್ಲಿ ಅಭಿವೃದ್ಧಿ ಚಟುವಟಿಕೆಗಳಿಗೆ

ಸಂಬಂಧಪಡುವಷ್ಟರ ಮಟ್ಟಿಗೆ ಅಂಥ ಇತರ ನಿಕಾಯಗಳ ಚಟುವಟಿಕೆಗಳನ್ನು ಸಮನ್ವಯಗೊಳಿಸುವುದು.

1. 2017ರ ಅಧಿನಿಯಮ ಸಂಖ್ಯೆ 05ರ ಮೂಲಕ ದಿನಾಂಕ: 04.01.2017ರಿಂದ ಪ್ರತಿಯೋಜಿಸಲಾಗಿದೆ.

**10. ಬೆಂಗಳೂರು ಮಹಾ ನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಅನುಮತಿಯಿಲ್ಲದೆ ಇತರ ಪ್ರಾಧಿಕಾರ ಅಥವಾ ವ್ಯಕ್ತಿಗಳು ಕೆಲವು ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳತಕ್ಕದ್ದಲ್ಲ.**- (1) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನಲ್ಲಿ ಏನೇ ಒಳಗೊಂಡಿದ್ದರೂ, ಬೆಂಗಳೂರು ಮಹಾ ನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಪೂರ್ವಾನುಮತಿಯಿದ್ದ ಹೊರತು ಬೆಂಗಳೂರು ಮಹಾ ನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರವು ಸರ್ಕಾರಿ ರಾಜ್ಯ ಪತ್ರದಲ್ಲಿ ಪ್ರಕಟಿಸಲಾದ ಅಧಿಸೂಚನೆ ಮೂಲಕ ಆಗಿಂದಾಗ್ಗೆ ನಿರ್ದಿಷ್ಟಪಡಿಸಬಹುದಾದ ರೀತಿಯ ಯಾವುದೇ ಅಭಿವೃದ್ಧಿ ಕಾರ್ಯವನ್ನು ಯಾವುದೇ ಪ್ರಾಧಿಕಾರವು ಅಥವಾ ಯಾವೊಬ್ಬ ವ್ಯಕ್ತಿಯು ಬೆಂಗಳೂರು ಮಹಾನಗರ ಪ್ರದೇಶದಲ್ಲಿ ಕೈಗೊಳ್ಳತಕ್ಕದ್ದಲ್ಲ.

(2) ಬೆಂಗಳೂರು ಮಹಾನಗರ ಪ್ರದೇಶದಲ್ಲಿ, (1)ನೇ ಉಪಪ್ರಕರಣದಲ್ಲಿ ಉಲ್ಲಿಖಿತವಾದ ಯಾವುದೇ ಅಭಿವೃದ್ಧಿ ಕಾರ್ಯದ ಸಲುವಾಗಿ, ಅಂಥ ಅಭಿವೃದ್ಧಿಗಾಗಿ ಬೆಂಗಳೂರು ಮಹಾ ನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರವು ಅನುಮತಿ ನೀಡಿದ ಹೊರತು, ಸ್ಥಳೀಯ ಪ್ರಾಧಿಕಾರವು ಅನುಮತಿ ನೀಡತಕ್ಕದ್ದಲ್ಲ.

(3) (1)ನೇ ಉಪಪ್ರಕರಣದಲ್ಲಿ ಉಲ್ಲಿಖಿತವಾದ ಅಭಿವೃದ್ಧಿ ಕಾರ್ಯವನ್ನು ಕೈಗೊಳ್ಳಲು ಯಾವುದೇ ಪ್ರಾಧಿಕಾರ ಅಥವಾ ವ್ಯಕ್ತಿಯು ಅಂಥ ಅಭಿವೃದ್ಧಿ ಕಾರ್ಯವನ್ನು ಕೈಗೊಳ್ಳಲು ಅನುಮತಿಗಾಗಿ, ಬೆಂಗಳೂರು ನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರಕ್ಕೆ ಲಿಖಿತದಲ್ಲಿ ಅರ್ಜಿ ಸಲ್ಲಿಸತಕ್ಕದ್ದು.

(4) ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರವು, ತಾನು ಅವಶ್ಯಕವೆಂದು ಭಾವಿಸುವ ಅಂಥ ವಿಚಾರಣೆಯನ್ನು ಮಾಡಿದ ತರುವಾಯ, ವಿಧಿಸಲು ಯೋಗ್ಯವೆಂದು ತಾನು ಭಾವಿಸಬಹುದಾದಂಥ ಷರತ್ತುಗಳಿಲ್ಲದೆ ಅಥವಾ ಅಂಥ ಷರತ್ತುಗಳೊಂದಿಗೆ ಅಂಥ ಅನುಮತಿಯನ್ನು ನೀಡಬಹುದು ಅಥವಾ ಅನುಮತಿಯನ್ನು ನಿರಾಕರಿಸಬಹುದು.

(5) (4)ನೇ ಉಪಪ್ರಕರಣದ ಅಡಿಯಲ್ಲಿನ ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ತೀರ್ಮಾನದಿಂದ ಬಾಧಿತವಾದ ಯಾವುದೇ ಪ್ರಾಧಿಕಾರ ಅಥವಾ ವ್ಯಕ್ತಿ, ತೀರ್ಮಾನದ ದಿನಾಂಕದಿಂದ ಮೂವತ್ತು ದಿನಗಳೊಳಗಾಗಿ ಅಂಥ ತೀರ್ಮಾನದ ವಿರುದ್ಧ ರಾಜ್ಯ ಸರ್ಕಾರಕ್ಕೆ ಅಪೀಲು ಸಲ್ಲಿಸಬಹುದು ಮತ್ತು ಅದರ ಮೇಲಣ ಅದರ ತೀರ್ಮಾನವು ಅಂತಿಮವಾಗಿರತಕ್ಕದ್ದು:

ಪರಂತು, ಅಂಥ ಅಪೀಲನ್ನು ಸಲ್ಲಿಸುವ, ಬಾಧಿತ ಪ್ರಾಧಿಕಾರವು ಕೇಂದ್ರ ಸರ್ಕಾರದ ಆಡಳಿತ ನಿಯಂತ್ರಣಕ್ಕೊಳಪಟ್ಟಿರುವಲ್ಲಿ, ಕೇಂದ್ರ ಸರ್ಕಾರದೊಂದಿಗೆ ಸಮಾಲೋಚನೆ ನಡೆಸಿದ ತರುವಾಯ ರಾಜ್ಯ ಸರ್ಕಾರವು ಅಪೀಲನ್ನು ತೀರ್ಮಾನಿಸತಕ್ಕದ್ದು.

(6) (4)ನೇ ಉಪಪ್ರಕರಣದ ಅಡಿಯಲ್ಲಿ ನೀಡಲಾಗಿರುವ (5)ನೇ ಉಪಪ್ರಕರಣದಲ್ಲಿ ಮಾರ್ಪಾಟುಗೊಂಡ ತೀರ್ಮಾನಕ್ಕೆ ವಿರುದ್ಧವಾಗಿ ಯಾವೊಬ್ಬ ವ್ಯಕ್ತಿಯು ಅಥವಾ ಪ್ರಾಧಿಕಾರವು ಯಾವುದೇ ಕೃತ್ಯವನ್ನು ಮಾಡಿದ ಸಂದರ್ಭದಲ್ಲಿ, ಅಂಥ ತೀರ್ಮಾನಕ್ಕೆ ವಿರುದ್ಧವಾಗಿ ಕೈಗೊಂಡ ಸುಧಾರಣಾ ಕಾರ್ಯವನ್ನು ಕೆಡಹುವ, ನಾಶಪಡಿಸುವ ಅಥವಾ ತೆಗೆದುಹಾಕುವ ಮತ್ತು ಈ ರೀತಿ ಕೆಡವಲು, ನಾಶಪಡಿಸಲು ಅಥವಾ ತೆಗೆದುಹಾಕಲು ತಗುಲಿದ ವೆಚ್ಚವನ್ನು ಸಂಬಂಧಪಟ್ಟ ವ್ಯಕ್ತಿಯಿಂದ ಅಥವಾ ಪ್ರಾಧಿಕಾರದಿಂದ ವಸೂಲು ಮಾಡುವ ಅಧಿಕಾರವನ್ನು ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರವು ಹೊಂದಿರತಕ್ಕದ್ದು.

## ಅಧ್ಯಾಯ IV

## ಹಣಕಾಸು, ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನೆ

**11. ಪ್ರಾಧಿಕಾರದ ನಿಧಿ.-** (1) ಪ್ರಾಧಿಕಾರವು, ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ನಿಧಿ ಎಂದು ಕರೆಯಲಾಗುವ ಒಂದು ನಿಧಿಯನ್ನು ಹೊಂದಿರತಕ್ಕದ್ದು ಮತ್ತು ಪ್ರಾಧಿಕಾರದಿಂದ ಪ್ರಾಧಿಕೃತಗೊಳಿಸಬಹುದಾದಂಥ ಅಧಿಕಾರಿಗಳು ಅದನ್ನು ನಿರ್ವಹಿಸತಕ್ಕದ್ದು.

(2) ಈ ಅಧಿನಿಯಮದ ಎಲ್ಲ ಅಥವಾ ಯಾವುವೇ ಉದ್ದೇಶಗಳಿಗಾಗಿ ಪ್ರಾಧಿಕಾರವು ಕೇಂದ್ರ ಸರ್ಕಾರ, ರಾಜ್ಯ ಸರ್ಕಾರ ಒಂದು ಸ್ಥಳೀಯ ಪ್ರಾಧಿಕಾರ ಅಥವಾ ಯಾವೊಬ್ಬ ವ್ಯಕ್ತಿ ಅಥವಾ ನಿಗಮಿತವಾದ ಅಥವಾ ನಿಗಮಿತವಾಗಿಲ್ಲದ ನಿಕಾಯದಿಂದ ಅನುದಾನ, ಆರ್ಥಿಕ ಸಹಾಯ, ಕೊಡುಗೆ, ದಾನ ಮತ್ತು ಕಾಣಿಕೆಗಳನ್ನು ಸ್ವೀಕರಿಸಬಹುದು.

(3) ಪ್ರಾಧಿಕಾರವು ತನ್ನ ಆಡಳಿತಾತ್ಮಕ ವೆಚ್ಚಗಳನ್ನು ತನ್ನದೇ ಆದ ಸಂಪನ್ಮೂಲಗಳಿಂದ ಪೂರೈಸಲು ಸಮರ್ಥವಾಗುವವರೆಗೆ, ರಾಜ್ಯ ಸರ್ಕಾರವು, ಪ್ರತಿ ವರ್ಷವೂ, ಪ್ರಾಧಿಕಾರದ ಆಡಳಿತಾತ್ಮಕ ವೆಚ್ಚಗಳಿಗೆ ಸಮವಾದ ಹಣದ ಅನುದಾನವನ್ನು ಪ್ರಾಧಿಕಾರಕ್ಕೆ ನೀಡತಕ್ಕದ್ದು.

(4) ಈ ಅಧಿನಿಯಮದ ನಿಮಿತ್ತ, ಪ್ರಾಧಿಕಾರದಿಂದ ಅಥವಾ ಪ್ರಾಧಿಕಾರದ ಪರವಾಗಿ ಸ್ವೀಕೃತವಾದ ಎಲ್ಲ ಹಣಗಳು ಮತ್ತು ಪ್ರಾಧಿಕಾರಕ್ಕೆ ಒದಗಿ ಬರುವ ಅಥವಾ ಅದು ಪಡೆದ ಸಾಲ, ಎಲ್ಲ ಬಡ್ಡಿಗಳು, ಲಾಭಗಳು ಮತ್ತು ಇತರ ಹಣಗಳು ನಿಧಿಗೆ ಜಮೆಯಾಗತಕ್ಕದ್ದು.

(5) ರಾಜ್ಯ ಸರ್ಕಾರವು ಅನ್ಯಥಾ ನಿರ್ದೇಶಿಸಿದ ಹೊರತು, ಮೇಲಿನ ಉಪಬಂಧಗಳಲ್ಲಿ ನಿರ್ದಿಷ್ಟಪಡಿಸಿದ ಮತ್ತು ನಿಧಿಯ ಭಾಗವಾಗುವ ಎಲ್ಲ ಹಣಗಳು ಮತ್ತು ಜಮೆಗಳನ್ನು ಭಾರತ ರಿಜರ್ವ್‌ಬ್ಯಾಂಕ್ ಅಧಿನಿಯಮ, 1934ರಲ್ಲಿ ಪರಿಭಾಷಿಸಲಾಗಿರುವ ಯಾವುದೇ ಅನುಸೂಚಿತ ಬ್ಯಾಂಕಿನಲ್ಲಿ ಠೇವಣಿ ಇಡತಕ್ಕದ್ದು ಅಥವಾ ರಾಜ್ಯ ಸರ್ಕಾರದಿಂದ ಅನುಮೋದಿತವಾದಂಥ ಭದ್ರತೆಗಳಲ್ಲಿ ತೊಡಗಿಸತಕ್ಕದ್ದು.

(6) ಈ ಅಧಿನಿಯಮದ ಉಪಬಂಧಗಳಿಗೊಳಪಟ್ಟು ಮತ್ತು ಅದರ ಉದ್ದೇಶಗಳಿಗಾಗಿ ನಿಧಿಯನ್ನು ಮತ್ತು ಪ್ರಾಧಿಕಾರದಲ್ಲಿ ನಿಹಿತವಾಗಿರುವ ಇತರ ಎಲ್ಲ ಆಸ್ತಿಗಳನ್ನು ಅದು ಹೊಂದಿರತಕ್ಕದ್ದು ಮತ್ತು ವಿನಿಯೋಗಿಸತಕ್ಕದ್ದು.

**12. ಆಯವ್ಯಯ.-** ಪ್ರಾಧಿಕಾರವು, ಪ್ರತಿವರ್ಷವೂ, ನಿಯಮಿಸಬಹುದಾದಂಥ ನಮೂನೆಯಲ್ಲಿ ಮತ್ತು ಅಂಥ ಕಾಲದಲ್ಲಿ, ಮುಂದಿನ ಹಣಕಾಸು ವರ್ಷಕ್ಕೆ ಸಂಬಂಧಿಸಿದಂತೆ, ಪ್ರಾಧಿಕಾರದ ಅಂದಾಜು ಜಮೆಗಳು ಮತ್ತು ಬಟವಾಡೆಗಳನ್ನು ತೋರಿಸುವ ವಾರ್ಷಿಕ ಆಯವ್ಯಯ ಅಂದಾಜೊಂದನ್ನು ತಯಾರಿಸತಕ್ಕದ್ದು ಮತ್ತು ಅದರ ಒಂದು ಪ್ರತಿಯನ್ನು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

**13. ವಾರ್ಷಿಕ ವರದಿ.-** ಪ್ರಾಧಿಕಾರವು, ಪ್ರತಿವರ್ಷದ ಮುಕ್ತಾಯದ ತರುವಾಯ, ನಿಯಮಿಸಬಹುದಾದಂಥ ನಮೂನೆಯಲ್ಲಿ ಮತ್ತು ಅಂಥ ದಿನಾಂಕಕ್ಕೆ ಮುಂಚೆ, ಅಂಥ ವರ್ಷದಲ್ಲಿಯ ತನ್ನ ಚಟುವಟಿಕೆಗಳ ವರದಿಯನ್ನು ತಯಾರಿಸತಕ್ಕದ್ದು ಮತ್ತು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು ಮತ್ತು ರಾಜ್ಯ ಸರ್ಕಾರವು ಅಂಥ ವರದಿಯ ಒಂದು ಪ್ರತಿಯನ್ನು ರಾಜ್ಯ ವಿಧಾನಮಂಡಲದ ಎರಡೂ ಸದನಗಳ ಮುಂದೆ ಮಂಡಿಸುವಂತೆ ಮಾಡತಕ್ಕದ್ದು.

**14. ಪ್ರಾಧಿಕಾರಕ್ಕೆ ಆರ್ಥಿಕ ಸಹಾಯ ಮತ್ತು ಸಾಲಗಳು.-** (1) ರಾಜ್ಯ ಸರ್ಕಾರವು ಆಗಿಂದಾಗ್ಗೆ, ಈ ಅಧಿನಿಯಮದ ಉದ್ದೇಶಗಳಿಗಾಗಿ ರಾಜ್ಯಸರ್ಕಾರವು ನಿರ್ಧರಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳ ಮೇಲೆ ಪ್ರಾಧಿಕಾರಕ್ಕೆ ಆರ್ಥಿಕ ಸಹಾಯವನ್ನು ನೀಡಬಹುದು.

(2) ರಾಜ್ಯ ಸರ್ಕಾರವು, ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಾಗಿಲ್ಲದಂಥ ರಾಜ್ಯ ಸರ್ಕಾರವು ನಿರ್ಧರಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳ ಮೇಲೆ ಪ್ರಾಧಿಕಾರಕ್ಕೆ ಸಾಲಗಳನ್ನು ಆಗಿಂದಾಗ್ಗೆ ನೀಡಬಹುದು.

**15. ಸಾಲ ಪಡೆಯುವುದಕ್ಕೆ ಪ್ರಾಧಿಕಾರದ ಅಧಿಕಾರ.-** ಪ್ರಾಧಿಕಾರವು, ರಾಜ್ಯ ಸರ್ಕಾರದ ಪೂರ್ವ ಮಂಜೂರಾತಿಯೊಂದಿಗೆ ಮತ್ತು ಈ ಅಧಿನಿಯಮದ ಉಪಬಂಧಗಳಿಗೆ ಮತ್ತು ಈ ಸಂಬಂಧದಲ್ಲಿ ನಿಯಮಿಸಬಹುದಾದ ಅಂಥ ಷರತ್ತುಗಳಿಗೆ ಒಳಪಟ್ಟು. ಈ ಅಧಿನಿಯಮದ ಉದ್ದೇಶಗಳಿಗಾಗಿ ಅಗತ್ಯವಿರುವ ಯಾವುದೇ ಹಣವನ್ನು ಆಗಿಂದಾಗ್ಗೆ ಸಾಲ ಪಡೆಯಬಹುದು.

**16. ಲೆಕ್ಕ ಮತ್ತು ಲೆಕ್ಕ ಪರಿಶೋಧನೆ.-** (1) ಪ್ರಾಧಿಕಾರವು, ಈ ಅಧಿನಿಯಮದ ಅಡಿಯಲ್ಲಿ ರಚಿಸಲಾದ ನಿಯಮಗಳು ಅಗತ್ಯಪಡಿಸಬಹುದಾದಂತೆ ಸರಿಯಾದ ಲೆಕ್ಕಗಳ ಪುಸ್ತಕಗಳು ಮತ್ತು ಅಂಥ ಇತರ ಪುಸ್ತಕಗಳನ್ನು ಇಡುವಂತೆ ಮಾಡತಕ್ಕದ್ದು ಮತ್ತು ಅಂಥ ನಿಯಮಗಳಿಗನುಸಾರವಾಗಿ, ಲೆಕ್ಕಗಳ ವಾರ್ಷಿಕ ಹೇಳಿಕೆಯನ್ನು ಸಿದ್ಧಪಡಿಸತಕ್ಕದ್ದು.

(2) ಪ್ರಾಧಿಕಾರವು, ರಾಜ್ಯ ಸರ್ಕಾರವು ನಿರ್ದೇಶಿಸಬಹುದಾದಂಥ ವ್ಯಕ್ತಿಗಳಿಂದ ವಾರ್ಷಿಕವಾಗಿ ತನ್ನ ಲೆಕ್ಕಗಳ ಲೆಕ್ಕಪರಿಶೋಧನೆಯಾಗುವಂತೆ ಮಾಡತಕ್ಕದ್ದು.

[1][(3) ಪ್ರಾಧಿಕಾರವು ಪರಿಶೋಧಿತ ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧಕರ ವರದಿಯನ್ನು ನಿಯಮಿಸಿದ ನಮೂನೆಯಲ್ಲಿ ಪ್ರಕಟಿಸತಕ್ಕದ್ದು. ಪ್ರಾಧಿಕಾರವು ಅಂಥ ಪರಿಶೋಧಿತ ಲೆಕ್ಕಪತ್ರಗಳ ಪ್ರತಿಗಳನ್ನು ಮತ್ತು ಲೆಕ್ಕಪರಿಶೋಧಕರ ವರದಿಯ ಪ್ರತಿಯನ್ನು ರಾಜ್ಯ ಸರ್ಕಾರಕ್ಕೆ ಕಳುಹಿಸತಕ್ಕದ್ದು. ರಾಜ್ಯ ಸರ್ಕಾರವು ಪರಿಶೋಧಿತ ಲೆಕ್ಕಪತ್ರಗಳನ್ನು ಹಾಗೂ ಲೆಕ್ಕ ಪರಿಶೋಧಕರ ವರದಿಯನ್ನು ಸ್ವೀಕರಿಸಿದ ಮೇಲೆ ಆದಷ್ಟು ಬೇಗನೆ ಅವನ್ನು ರಾಜ್ಯ ವಿಧಾನಮಂಡಲದ ಉಭಯ ಸದನಗಳ ಮುಂದೆ ಮಂಡಿಸತಕ್ಕದ್ದು.][1]

1. 2010ರ ಅಧಿನಿಯಮ ಸಂಖ್ಯೆ: 16ರ ಮೂಲಕ ದಿನಾಂಕ:16.04.2010 ರಿಂದ ಪ್ರತಿಯೋಜಿಸಲಾಗಿದೆ.

(4) ಲೆಕ್ಕ ಪರಿಶೋಧಕರ ವರದಿಯ ಪರಿಶೀಲನೆಯ ತರುವಾಯ, ರಾಜ್ಯ ಸರ್ಕಾರವು ಸೂಕ್ತವೆಂದು ಭಾವಿಸಿ ಹೊರಡಿಸಬಹುದಾದಂಥ ನಿರ್ದೇಶಗಳನ್ನು ಪ್ರಾಧಿಕಾರವು ಪಾಲಿಸತಕ್ಕದ್ದು.

## ಅಧ್ಯಾಯ V

### ಸಂಕೀರ್ಣ

**17. ಪ್ರವೇಶಾಧಿಕಾರಗಳು.-** ಪ್ರಾಧಿಕಾರವು ಯಾವುದೇ ಭೂಮಿಯ ಅಥವಾ ಕಟ್ಟಡದ ಒಳಗೆ ಅಥವಾ ಮೇಲೆ,-

(ಎ) ಅಂಥ ಭೂಮಿಯ ಅಥವಾ ಕಟ್ಟಡದ ಯಾವುದೇ ವಿಚಾರಣೆ, ಪರಿವೀಕ್ಷಣೆ, ಅಳತೆ ಅಥವಾ ಸಮೀಕ್ಷೆ ನಡೆಸುವ ಅಥವಾ ಮಟ್ಟಗಳನ್ನು ತೆಗೆದುಕೊಳ್ಳುವ;

(ಬಿ) ನಿರ್ಮಾಣದ ಹಂತದಲ್ಲಿರುವ ಕಾಮಗಾರಿಗಳನ್ನು ಪರೀಕ್ಷಿಸುವ ಮತ್ತು ಒಳ ಚರಂಡಿ ಮತ್ತು ಚರಂಡಿಗಳ ಮಾರ್ಗವನ್ನು ನಿರ್ಧರಿಸುವ;

(ಸಿ) ಭೂಮಿಯ ಒಳಪದರಕ್ಕೆ ಆಗೆಯುವ ಅಥವಾ ಕೊರೆಯುವ;

(ಡಿ) ಮೇರೆಗಳನ್ನು ಮತ್ತು ಉದ್ದೇಶಿತ ಕಾರ್ಯರೇಖೆಗಳನ್ನು ನಿರ್ಧರಿಸುವ;

(ಇ) ಗುರುತುಗಳನ್ನು ಹಾಕಿ ಮತ್ತು ಕಾಲುವೆಗಳನ್ನು ತೋಡಿ ಅಂಥ ಮಟ್ಟಗಳು, ಮೇರೆಗಳು ಮತ್ತು ರೇಖೆಗಳನ್ನು ಮಾಡುವ;

(ಎಫ್) ಯಾವುದೇ ಭೂಮಿಯನ್ನು, ಯಾವುದೇ ನಕ್ಷೆಯನ್ನು ಉಲ್ಲಂಘಿಸಿ ಅಥವಾ ಯಾವ ಷರತ್ತುಗಳಿಗೊಳಪಟ್ಟು ಅನುಮತಿ ನೀಡಲಾಗಿದೆಯೋ ಆ ಯಾವುವೇ ಷರತ್ತುಗಳನ್ನು ಉಲ್ಲಂಘಿಸಿ ಅಭಿವೃದ್ಧಿ ಗೊಳಿಸಲಾಗುತ್ತಿದೆಯೇ ಅಥವಾ ಅಭಿವೃದ್ಧಿಗೊಳಿಸಲಾಗಿದೆಯೇ ಎಂಬುದನ್ನು ಖಚಿತಪಡಿಸುವ ; ಅಥವಾ

(ಜಿ) ಈ ಅಧಿನಿಯಮದ ಸಮರ್ಥ ನಿರ್ವಹಣೆಗೆ ಅವಶ್ಯಕವಿರುವ ಇತರ ಯಾವುದೇ ಕಾರ್ಯವನ್ನು ಮಾಡುವ,

-ಉದ್ದೇಶಗಳಿಗಾಗಿ ಸಹಾಯಕರು ಅಥವಾ ಕೆಲಸಗಾರರೊಂದಿಗೆ ಅಥವಾ ಅವರಿಲ್ಲದೆ ಪ್ರವೇಶಿಸಲು ಯಾವೊಬ್ಬ ವ್ಯಕ್ತಿಯನ್ನು ಪ್ರಾಧಿಕೃತಗೊಳಿಸಬಹುದು:

ಪರಂತು,-

(i) ಸೂರ್ಯೋದಯ ಹಾಗೂ ಸೂರ್ಯಾಸ್ತಗಳ ನಡುವಣ ಅವಧಿಯ ಹೊರತು ಮತ್ತು ಅಧಿಭೋಗದಾರನಿಗೆ ಅಥವಾ ಅಧಿಭೋಗದಾರನಿಲ್ಲದಿದ್ದರೆ, ಭೂಮಿಯ ಅಥವಾ ಕಟ್ಟಡದ ಮಾಲೀಕನಿಗೆ ಸೂಕ್ತ ನೋಟೀಸನ್ನು ನೀಡದೆ ಅಂಥ ಪ್ರವೇಶವನ್ನು ಮಾಡತಕ್ಕದ್ದಲ್ಲ;

(ii) ಪ್ರತಿಯೊಂದು ಸಂದರ್ಭದಲ್ಲಿಯೂ, ಅಂಥ ಭೂಮಿ ಅಥವಾ ಕಟ್ಟಡದಲ್ಲಿ ಮಹಿಳೆಯರು ಅಥವಾ ಮಕ್ಕಳು, ಯಾರಾದರೂ ಇದ್ದರೆ, ಅವರಿಗೆ ಅಲ್ಲಿಂದ ಹೊರಹೋಗಲು ಸಾಕಷ್ಟು ಅವಕಾಶವನ್ನು ನೀಡತಕ್ಕದ್ದು;

(iii) ಯಾವ ಉದ್ದೇಶಕ್ಕಾಗಿ ಪ್ರವೇಶ ಮಾಡಲಾಗಿದೆಯೋ ಆ ಉದ್ದೇಶದ ಸಂದರ್ಭೋಚಿತ ಅವಶ್ಯಕತೆಗಳಿಗೆ ಸಂಗತವಾಗಿರುವಷ್ಟರಮಟ್ಟಿಗೆ, ಪ್ರವೇಶಿಸಿದ ಭೂಮಿಯ ಅಥವಾ ಕಟ್ಟಡದ ಅಧಿಭೋಗದಾರರ ಸಾಮಾಜಿಕ ಮತ್ತು ಧಾರ್ಮಿಕ ಅಚರಣೆಗಳಿಗೆ ಯಾವಾಗಲೂ ಸೂಕ್ತ ಗಮನ ನೀಡತಕ್ಕದ್ದು.

**18. ಪ್ರಾಧಿಕಾರದಿಂದ ನಿರ್ದೇಶಗಳು.-** (1) ಪ್ರಾಧಿಕಾರವು, 9ನೇ ಪ್ರಕರಣದ ಅಡಿಯಲ್ಲಿ ರೂಪಿಸಲಾದ ಅಭಿವೃದ್ಧಿ ಯೋಜನೆಗಳು ಮತ್ತು ಸ್ಕೀಮುಗಳನ್ನು ಅಥವಾ ಯಾವುದೇ ಪಟ್ಟಣ ಯೋಜನಾ ಸ್ಕೀಮನ್ನು ನೆರವೇರಿಸುವ ಸಲುವಾಗಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಲಿ, ಕರ್ನಾಟಕ ವಿದ್ಯುಚ್ಛಕ್ತಿ ಮಂಡಲಿ ಮತ್ತು ಬೆಂಗಳೂರು ಮಹಾನಗರ ಪ್ರದೇಶದಲ್ಲಿ ಅಭಿವೃದ್ಧಿ ಚಟುವಟಿಕೆಗಳಿಗೆ ಸಂಬಂಧಪಟ್ಟ ಅಂಥ ಇತರ ನಿಕಾಯಗಳಿಗೆ ನಿರ್ದೇಶಗಳನ್ನು ನೀಡಬಹುದು. ಪ್ರಾಧಿಕಾರವು ಹೊರಡಿಸಿದ ನಿರ್ದೇಶಗಳು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 1976 (ಕರ್ನಾಟಕ ಅಧಿನಿಯಮ 1976ರ 12) 53ನೇ ಪ್ರಕರಣದ ಅಡಿಯಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಹೊರಡಿಸುವ ಯಾವುವೇ ನಿರ್ದೇಶಗಳಿಗಿಂತ ಹೆಚ್ಚಿನ ಪ್ರಭಾವವುಳ್ಳದ್ದಾಗಿರತಕ್ಕದ್ದು.

(2) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಇತರ ಕಾನೂನಿನಲ್ಲಿ ಏನೇ ಒಳಗೊಂಡಿದ್ದರೂ, ಅಂಥ ಪ್ರತಿಯೊಂದು ನಿರ್ದೇಶವನ್ನೂ ಅದನ್ನು ಯಾವ ನಿಕಾಯಕ್ಕಾಗಿ ಹೊರಡಿಸಲಾಗಿದೆಯೋ ಆ ನಿಕಾಯವು ಪಾಲಿಸತಕ್ಕದ್ದು. ತಪ್ಪಿದಲ್ಲಿ, (1)ನೇ ಉಪಪ್ರಕರಣದ ಅಡಿಯಲ್ಲಿ ಹೊರಡಿಸಿದ ನಿರ್ದೇಶಗಳನ್ನು ನೆರವೇರಿಸಲು ಅವಶ್ಯ ಕ್ರಮವನ್ನು ಕೈಗೊಳ್ಳಲು ಮತ್ತು ಅದಕ್ಕೆ ತಗುಲಿದ ವೆಚ್ಚವೇನಾದರೂ ಇದ್ದರೆ, ಅದನ್ನು ಸಂಬಂಧಪಟ್ಟ ನಿಕಾಯದಿಂದ ವಸೂಲು ಮಾಡಲು ಪ್ರಾಧಿಕಾರವು ಸಕ್ಷಮವಾಗಿರತಕ್ಕದ್ದು.

(3) ಪ್ರಾಧಿಕಾರ ಮತ್ತು (1)ನೇ ಉಪಪ್ರಕರಣದಲ್ಲಿ ಉಲ್ಲಿಖಿತವಾದ ಮಂಡಲಿಗಳ ಅಥವಾ ಇತರ ನಿಕಾಯಗಳ ನಡುವೆ, ಅವುಗಳಿಗೆ ನೀಡಿದ ನಿರ್ದೇಶಗಳ ಸಂಬಂಧದಲ್ಲಿ ಯಾವುದೇ ವಿವಾದ ಉಂಟಾದರೆ, ಅದನ್ನು ರಾಜ್ಯ ಸರ್ಕಾರವು ನಿರ್ಧರಿಸತಕ್ಕದ್ದು ಮತ್ತು ಅದರ ತೀರ್ಮಾನವು ಅಂತಿಮವಾಗಿರತಕ್ಕದ್ದು.

**19. ಮಹಾನಗರ ಆಯುಕ್ತನು ನಿಗಮ ಮುಂತಾದವುಗಳ ಸಭೆಗಳಿಗೆ ಹಾಜರಾಗುವುದು.-** (1) ಮಹಾನಗರ ಆಯುಕ್ತನು ಬೆಂಗಳೂರು ನಗರ ನಿಗಮ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಲಿ, ಕರ್ನಾಟಕ ವಿದ್ಯುಚ್ಛಕ್ತಿ ಮಂಡಲಿ ಮತ್ತು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮಗಳ ಸಭೆಗಳಿಗೆ ಹಾಜರಾಗಲು ಮತ್ತು ಅವುಗಳಲ್ಲಿ ಪಾಲ್ಗೊಳಲು ಹಕ್ಕುಳ್ಳವನಾಗಿರತಕ್ಕದ್ದು ಅದರೆ ಮತ ನೀಡಲು ಅವನಿಗೆ ಹಕ್ಕಿರತಕ್ಕದ್ದಲ್ಲ.

(2) ಸದರಿ ನಿಕಾಯಗಳು ಮಹಾ ನಗರ ಆಯುಕ್ತನನ್ನು ತಮ್ಮ ಸಭೆಗಳಿಗೆ ಹಾಜರಾಗುವಂತೆ ಆಹ್ವಾನಿಸತಕ್ಕದ್ದು.

**20. ಅಧಿನಿಯಮದ ಉಪಬಂಧಗಳ ಉಲ್ಲಂಘನೆಗೆ ದಂಡ.-** ಈ ಅಧಿನಿಯಮದ ಯಾವುವೇ ಉಪಬಂಧಗಳನ್ನು ಅಥವಾ ಅದರ ಅಡಿಯಲ್ಲಿ ರಚಿತವಾದ ಅಥವಾ ಮಂಜೂರಾದ ಯಾವುದೇ ನಿಯಮ, ವಿನಿಯಮ ಅಥವಾ ಉಪ-ಕಾನೂನನ್ನು ಅಥವಾ ಸ್ಕೀಮನ್ನು ಉಲ್ಲಂಘಿಸುವ ಯಾವೊಬ್ಬ ವ್ಯಕ್ತಿಯು ಒಂದು ವರ್ಷದವರೆಗೆ ವಿಸ್ತರಿಸಬಹುದಾದ ಅವಧಿಯ ಕಾರಾವಾಸದಿಂದ ಅಥವಾ ಹತ್ತು ಸಾವಿರ ರೂಪಾಯಿಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆಯಿಂದ ಅಥವಾ ಎರಡರಿಂದಲೂ ದಂಡಿತನಾಗತಕ್ಕದ್ದು ಮತ್ತು ಉಲ್ಲಂಘನೆಯು ಮುಂದುವರಿದ ಸಂದರ್ಭದಲ್ಲಿ, ಉಲ್ಲಂಘನೆಯು ಮುಂದುವರಿದ ಮೊದಲನೆಯದರ ತರವಾಯದ ಪ್ರತಿಯೊಂದು ದಿನಕ್ಕೆ ಒಂದು ತಿಂಗಳವರೆಗೆ ವಿಸ್ತರಿಸಬಹಾದಾದ ಅವಧಿಯ ಹೆಚ್ಚುವರಿ ಕಾರಾವಾಸದಿಂದ ಅಥವಾ ಐದುನೂರು ರೂಪಾಯಿಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆಯಿಂದ ಅಥವಾ ಎರಡರಿಂದಲೂ ದಂಡಿತನಾಗತಕ್ಕದ್ದು.

**21. ಕಂಪನಿಗಳಿಂದ ಅಪರಾಧಗಳು.-** (1) ಈ ಅಧಿನಿಯಮದ ಅಡಿಯಲ್ಲಿ ಅಪರಾಧವನ್ನು ಮಾಡುವ ವ್ಯಕ್ತಿಯು ಒಂದು ಕಂಪನಿಯಾಗಿದ್ದು, ಅಪರಾಧವು ನಡೆದ ಕಾಲದಲ್ಲಿ ಆ ಕಂಪನಿಯ ವ್ಯವಹರಣೆಗಳ ನಿರ್ವಹಣೆಗಾಗಿ ಕಂಪನಿಯ ಪ್ರಭಾರದಲ್ಲಿದ್ದ ಮತ್ತು ಅದಕ್ಕೆ ಜವಾಬ್ದಾರನಾಗಿದ್ದ ಪ್ರತಿಯೊಬ್ಬ ವ್ಯಕ್ತಿಯನ್ನು ಮತ್ತು ಕಂಪನಿಯನ್ನು ಆ ಅಪರಾಧದ ದೋಷಿಯೆಂದು ಭಾವಿಸತಕ್ಕದ್ದು ಮತ್ತು ತದನುಸಾರವಾಗಿ ಅವರ ವಿರುದ್ಧದ ವ್ಯವಹರಣೆಗೆ ಮತ್ತು ದಂಡನೆಗೆ ಗುರಿಯಾಗತಕ್ಕದ್ದು:

ಪರಂತು, ಅಂಥ ಅಪರಾಧವು ತನ್ನ ತಿಳಿವಳಿಕೆಗೆ ಬಾರದೆ ನಡೆಯಿತೆಂದು ಅಥವಾ ಅಂಥ ಅಪರಾಧವನ್ನು ತಡೆಗಟ್ಟಲು ತಾನು ಯಥೋಚಿತವಾದ ಜಾಗರೂಕತೆಯನ್ನು ವಹಿಸಿದ್ದೆನೆಂದು ಅಂಥ ಯಾವೊಬ್ಬ ವ್ಯಕ್ತಿಯು ರುಜುವಾತುಪಡಿಸಿದರೆ, ಈ ಉಪಪ್ರಕರಣದಲ್ಲಿ ಒಳಗೊಂಡಿರುವುದು ಯಾವುದೂ, ಈ ಅಧಿನಿಯಮದಲ್ಲಿ ಉಪಬಂಧಿಸಲಾಗಿರುವ ಯಾವುದೇ ಶಿಕ್ಷೆಗೆ ಅಂಥ ವ್ಯಕ್ತಿಯನ್ನು ಗುರಿಯಾಗುವಂತೆ ಮಾಡತಕ್ಕದ್ದಲ್ಲ.

(2) (1)ನೇ ಉಪಪ್ರಕರಣದಲ್ಲಿ ಏನೇ ಒಳಗೊಂಡಿದ್ದರೂ, ಈ ಅಧಿನಿಯಮದ ಅಡಿಯಲ್ಲಿಯ ಒಂದು ಅಪರಾಧವನ್ನು ಕಂಪನಿಯು ಮಾಡಿರುವಲ್ಲಿ ಮತ್ತು ಆ ಅಪರಾಧವು ಕಂಪನಿಯ ಯಾವೊಬ್ಬ ನಿರ್ದೇಶಕ, ವ್ಯವಸ್ಥಾಪಕ, ಕಾರ್ಯದರ್ಶಿ ಅಥವಾ ಇತರ ಅಧಿಕಾರಿಯ ಸಮ್ಮತಿಯಿಂದ ಅಥವಾ ಪರೋಕ್ಷ ಸಮ್ಮತಿಯಿಂದ ಅಥವಾ ಅವನ ಕಡೆಯಿಂದಾದ ಯಾವುದೇ ನಿರ್ಲಕ್ಷ್ಯದ ಕಾರಣದಿಂದ ಸಂಭವಿಸಿತೆಂದು ಹೇಳಬಹುದಾದರೆ ಅಂಥ ನಿರ್ದೇಶಕ, ವ್ಯವಸ್ಥಾಪಕ, ಕಾರ್ಯದರ್ಶಿ ಅಥವಾ ಇತರ ಅಧಿಕಾರಿಯನ್ನು ಸಹ ಆ ಅಪರಾಧದ ಬಗ್ಗೆ ದೋಷಿಯೆಂದು ಭಾವಿಸತಕ್ಕದ್ದು ಮತ್ತು ತದನುಸಾರವಾಗಿ ಅವನು ತನ್ನ ವಿರುದ್ಧದ ವ್ಯವಹರಣೆಗೆ ಮತ್ತು ದಂಡನೆಗೆ ಗುರಿಯಾಗತಕ್ಕದ್ದು.

***ವಿವರಣೆ.-*** ಈ ಪ್ರಕರಣದ ಉದ್ದೇಶಕ್ಕಾಗಿ,-

(ಎ) "ಕಂಪನಿ" ಎಂದರೆ, ಒಂದು ನಿಗಮಿತ ನಿಕಾಯ ಮತ್ತು ಇದು ಒಂದು ಫರ್ಮು ಅಥವಾ ವ್ಯಕ್ತಿಗಳ ಇತರ ಸಂಘವನ್ನು ಒಳಗೊಳ್ಳುತ್ತದೆ; ಮತ್ತು

(ಬಿ) "ನಿರ್ದೇಶಕ" ಎಂದರೆ, ಒಂದು ಫರ್ಮಿನ ಸಂಬಂಧದಲ್ಲಿ ಫರ್ಮಿನ ಒಬ್ಬ ಪಾಲುದಾರ.

**22. ವಸೂಲಾದ ಜುಲ್ಮಾನೆಗಳು ನಿಧಿಗೆ ಜಮೆಯಾಗಬೇಕು.-** ಈ ಅಧಿನಿಯಮದ ಅಡಿಯಲ್ಲಿ ಅಭಿಯೋಜನೆಗಳ ಸಂಬಂಧದಲ್ಲಿ ವಸೂಲಾದ ಎಲ್ಲಾ ಜುಲ್ಮಾನೆಗಳು ನಿಧಿಗೆ ಜಮೆಯಾಗತಕ್ಕದ್ದು.

**23. ಸದಸ್ಯರು ಮತ್ತು ಅಧಿಕಾರಿಗಳು ಸಾರ್ವಜನಿಕ ನೌಕರರಾಗಿರಬೇಕು.-** ಪ್ರಾಧಿಕಾರದ ಪ್ರತಿಯೊಬ್ಬ ಸದಸ್ಯ, ಪ್ರತಿಯೊಬ್ಬ ಅಧಿಕಾರಿ ಅಥವಾ ಇತರ ಉದ್ಯೋಗಿಯನ್ನು ಭಾರತ ದಂಡ ಸಂಹಿತೆಯ 21ನೇ ಪ್ರಕರಣದ ಅರ್ಥವ್ಯಾಪ್ತಿಯೊಳಗೆ ಸಾರ್ವಜನಿಕ ನೌಕರನೆಂದು ಭಾವಿಸತಕ್ಕದ್ದು.

**24. ಸದ್ಭಾವನೆಯಿಂದ ಕೈಕೊಂಡ ಕ್ರಮಕ್ಕೆ ರಕ್ಷಣೆ.-** ಈ ಅಧಿನಿಯಮದ ಅಡಿಯಲ್ಲಿ ಅಥವಾ ಅದರ ಅಡಿಯಲ್ಲಿ ರಚಿಸಲಾದ ಯಾವುದೇ ನಿಯಮ ಅಥವಾ ವಿನಿಯಮದ ಅಡಿಯಲ್ಲಿ ಸದ್ಭಾವನೆಯಿಂದ ಮಾಡಿದ ಅಥವಾ ಮಾಡಲು ಉದ್ದೇಶಿಸಿದ ಯಾವುದೇ ಕೃತ್ಯಕ್ಕಾಗಿ ಯಾವೊಬ್ಬ ವ್ಯಕ್ತಿಯ ವಿರುದ್ಧ ದಾವೆ, ಅಭಿಯೋಜನೆ ಅಥವಾ ಇತರ ಕಾನೂನು ವ್ಯವಹರಣೆಯು ಇರತಕ್ಕದ್ದಲ್ಲ.

**25. ಪ್ರತ್ಯಾಯೋಜಿಸುವ ಅಧಿಕಾರ.-** (1) ಪ್ರಾಧಿಕಾರವು, ಅಧಿಸೂಚನೆಯ ಮೂಲಕ ವಿನಿಯಮಗಳನ್ನು ರಚಿಸುವ ಅಧಿಕಾರವನ್ನು ಹೊರತುಪಡಿಸಿ, ಈ ಅಧಿನಿಯಮದ ಅಡಿಯಲ್ಲಿ ತಾನು ಚಲಾಯಿಸಬಹುದಾದ ಯಾವುದೇ ಅಧಿಕಾರವನ್ನು, ಅಧಿಸೂಚನೆಯಲ್ಲಿ ನಿರ್ದಿಷ್ಟಪಡಿಸಬಹುದಾದಂಥ ಪ್ರಾಧಿಕಾರದ ಅಧ್ಯಕ್ಷ ಅಥವಾ ಅಂಥ ಅಧಿಕಾರಿಯು ಸಹ ಅದರಲ್ಲಿ ನಿರ್ದಿಷ್ಟಪಡಿಸಬಹುದಾದಂಥ ನಿರ್ಬಂಧಗಳು ಮತ್ತು ಷರತ್ತುಗಳಿಗೆ ಒಳಪಟ್ಟು ಚಲಾಯಿಸಬಹುದೆಂದು ನಿರ್ದೇಶಿಸಬಹುದು.

**26. ಪುನರೀಕ್ಷಣೆ.-** (1) ರಾಜ್ಯ ಸರ್ಕಾರವು ಪ್ರಾಧಿಕಾರದ ಯಾವುವೇ ವ್ಯವಹರಣೆಗಳ ಕಾನೂನು ಸಮ್ಮತತೆ ಅಥವಾ ಔಚಿತ್ಯದ ಬಗ್ಗೆ ತಾನು ಮನದಟ್ಟು ಮಾಡಿಕೊಳ್ಳುವ ಉದ್ದೇಶಕ್ಕಾಗಿ ಆ ಯಾವುದೇ ಆದೇಶ ಅಥವಾ ವ್ಯವಹರಣೆಗಳ ದಾಖಲೆಗಳನ್ನು ತರಿಸಿಕೊಳ್ಳಬಹುದು ಮತ್ತು ಅದಕ್ಕೆ ಸಂಬಂಧಪಟ್ಟಂತೆ ತಾನು ಯುಕ್ತವೆಂದು ಭಾವಿಸಬಹುದಾದಂಥ ಆದೇಶವನ್ನು ಹೊರಡಿಸಬಹುದು.

(2) ಪ್ರಾಧಿಕಾರವು ತನ್ನ ಯಾವೊಬ್ಬ ಅಧೀನ ಅಧಿಕಾರಿಯ ಯಾವುವೇ ವ್ಯವಹರಣೆಗಳ ದಾಖಲೆಗಳನ್ನು, ಯಾವುದೇ ಆದೇಶದ ಅಥವಾ ವ್ಯವಹರಣೆಗಳ ಕಾನೂನು ಸಮ್ಮತತೆ ಅಥವಾ ಔಚಿತ್ಯದ ಬಗ್ಗೆ ತಾನು ಮನದಟ್ಟು ಮಾಡಿಕೊಳ್ಳುವ ಉದ್ದೇಶಕ್ಕಾಗಿ ತರಿಸಿಕೊಳ್ಳಬಹುದು ಮತ್ತು ಅದಕ್ಕೆ ಸಂಬಂಧಪಟ್ಟಂತೆ ತಾನು ಯುಕ್ತವೆಂದು ಭಾವಿಸುವಂಥ ಆದೇಶವನ್ನು ಹೊರಡಿಸಬಹುದು.

(3) ಮನವಿ ಮಾಡಿಕೊಳ್ಳಲು ಯಾವೊಬ್ಬ ವ್ಯಕ್ತಿಗೆ ಒಂದು ಅವಕಾಶವನ್ನು ನೀಡಿದ ಹೊರತು, (1)ನೇ ಉಪಪ್ರಕರಣದ ಅಥವಾ (2)ನೇ ಉಪಪ್ರಕರಣದ ಅಡಿಯಲ್ಲಿ ಅವನಿಗೆ ಪ್ರತಿಕೂಲವಾದ ಯಾವುದೇ ಆದೇಶವನ್ನು ಹೊರಡಿಸತಕ್ಕದ್ದಲ್ಲ.

**27. ಪ್ರಾಧಿಕಾರಕ್ಕೆ ನಿರ್ದೇಶಗಳನ್ನು ನೀಡಲು ಸರ್ಕಾರದ ಅಧಿಕಾರ.-** (1) ರಾಜ್ಯ ಸರ್ಕಾರವು ಪ್ರಾಧಿಕಾರಕ್ಕೆ ಈ ಅಧಿನಿಯಮದ ಉದ್ದೇಶಗಳನ್ನು ನೆರವೇರಿಸಲು ಅವಶ್ಯ ಅಥವಾ

ಯುಕ್ತವಾದವುಗಳೆಂದು ತಾನು ಭಾವಿಸಬಹುದಾದಂಥ ನಿರ್ದೇಶಗಳನ್ನು ನೀಡಬಹುದು ಮತ್ತು ಅಂಥ ನಿರ್ದೇಶವನ್ನು ಪಾಲಿಸುವುದು ಪ್ರಾಧಿಕಾರದ ಕರ್ತವ್ಯವಾಗಿರತಕ್ಕದ್ದು.

**28. ಅಧಿನಿಯಮವು ಇತರ ಕಾನೂನುಗಳಿಗೆ ಅಧ್ಯಾರೋಹಿಯಾಗಿರಬೇಕು.-** (1) ಈ ಅಧಿನಿಯಮದ ಉಪಬಂಧಗಳು, ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಇತರ ಕಾನೂನಿನಲ್ಲಿ ಅದಕ್ಕೆ ಅಸಂಗತವಾಗಿರುವಂಥ ಯಾವುದೇ ವಿಷಯವನ್ನು ಒಳಗೊಂಡಿದ್ದರೂ ಪರಿಣಾಮವುಳ್ಳದ್ದಾಗಿರತಕ್ಕದ್ದು.

**29. ನಿಯಮಗಳ ರಚನಾಧಿಕಾರ.-** (1) ರಾಜ್ಯ ಸರ್ಕಾರವು, ಪೂರ್ವ ಪ್ರಕಟಣೆಯ ಷರತ್ತಿಗೆ ಒಳಪಟ್ಟು, ಈ ಅಧಿನಿಯಮದ ಉದ್ದೇಶಗಳನ್ನು ನೆರವೇರಿಸುವ ಸಲುವಾಗಿ ಅಧಿಸೂಚನೆಯ ಮೂಲಕ ನಿಯಮಗಳನ್ನು ರಚಿಸಬಹುದು.

(2) ಈ ಪ್ರಕರಣದ ಅಡಿಯಲ್ಲಿ ರಚಿಸಿದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ಮೇಲೆ ಎಷ್ಟು ಬೇಗನೆ ಸಾಧ್ಯವೋ ಅಷ್ಟು ಬೇಗನೆ, ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ, ಅದು ಒಂದೇ ಅಧಿವೇಶನದಲ್ಲಿ ಅಥವಾ ಒಂದಾದ ಮೇಲೊಂದು ಬರುವ ಎರಡು ಅಥವಾ ಹೆಚ್ಚು ಅಧಿವೇಶನಗಳಲ್ಲಿ ಅಡಕವಾಗಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಅಧಿವೇಶನದಲ್ಲಿರುವಾಗ ಇರಿಸತಕ್ಕದ್ದು ಮತ್ತು ಹಿಂದೆ ಹೇಳಿದ ಅಧಿವೇಶನ ಅಥವಾ ಒಂದಾದ ಮೇಲೊಂದು ಬರುವ ಅಧಿವೇಶನಗಳ ನಿಕಟೋತ್ತರ ಅಧಿವೇಶನಗಳು ಮುಗಿಯುವುದಕ್ಕೂ ಮೊದಲು ಆ ನಿಯಮದಲ್ಲಿ ಯಾವುದೇ ಮಾರ್ಪಾಟು ಮಾಡಲು ಎರಡೂ ಸದನಗಳು ಒಪ್ಪಿದರೆ ಅಥವಾ ಆ ನಿಯಮವನ್ನು ಮಾಡಕೂಡದೆಂದು ಎರಡೂ ಸದನಗಳು ಒಪ್ಪಿದರೆ, ಆ ನಿಯಮವು ರಾಜ್ಯ ಸರ್ಕಾರವು ಸರ್ಕಾರಿ ರಾಜ್ಯಪತ್ರದಲ್ಲಿ ಮಾರ್ಪಾಟನ್ನು ಅಥವಾ ರದ್ದಿಯಾತಿಯನ್ನು ಅಧಿಸೂಚನೆ ಮಾಡಿದ ದಿನಾಂಕದಿಂದ, ಸಂದರ್ಭಾನುಸಾರ, ಅಂಥ ಮಾರ್ಪಾಟು ಆದ ರೂಪದಲ್ಲಿ ಮಾತ್ರ ಪರಿಣಾಮಕಾರಿಯಾಗತಕ್ಕದ್ದು ಅಥವಾ ಪರಿಣಾಮಕಾರಿಯಾಗತಕ್ಕದ್ದಲ್ಲ, ಆದರೆ ಅಂಥ ಮಾರ್ಪಾಟು ಅಥವಾ ರದ್ದಿಯಾತಿ ಆ ನಿಯಮದ ಅಡಿಯಲ್ಲಿ ಹಿಂದೆ ಮಾಡಿದ ಯಾವುದೇ ಕಾರ್ಯದ ಊರ್ಜಿತತೆಗೆ ಪ್ರತಿಕೂಲವಾಗಿ ಇರತಕ್ಕದ್ದಲ್ಲ.

**30. ವಿನಿಯಮಗಳು.-** ಪ್ರಾಧಿಕಾರವು, ಅಧಿಸೂಚನೆಯ ಮೂಲಕ ಮತ್ತು ಸರ್ಕಾರದ ಪೂರ್ವ ಮಂಜೂರಾತಿಯೊಂದಿಗೆ, ಈ ಅಧಿನಿಯಮದ ಅಡಿಯಲ್ಲಿನ ತನ್ನ ಪ್ರಕಾರ್ಯಗಳನ್ನು ನಿರ್ವಹಿಸಲು ಸಾಧ್ಯವಾಗುವಂತೆ, ಈ ಅಧಿನಿಯಮ ಮತ್ತು ಅದರ ಅಡಿಯಲ್ಲಿ ರಚಿಸಲಾದ ನಿಯಮಗಳಿಗೆ ಅಸಂಗತವಾಗದಂಥ ವಿನಿಯಮಗಳನ್ನು ರಚಿಸಬಹುದು. ಪ್ರಾಧಿಕಾರದ ಅಭಿಪ್ರಾಯದಲ್ಲಿ ಯಾವ ವಿಷಯದ ಸಂಬಂಧದಲ್ಲಿ ವಿನಿಯಮಗಳ ಮೂಲಕ ಉಪಬಂಧ ಕಲ್ಪಿಸಬೇಕೆಂದು ಅಥವಾ ಕಲ್ಪಿಸಬಹುದೆಂದು ಅಗತ್ಯಪಡಿಸಲಾಗಿದೆಯೋ ಆ ವಿಷಯದ ಸಂಬಂಧದಲ್ಲಿ ವಿನಿಯಮವನ್ನು ರಚಿಸಬಹುದು.

**31. ಕರ್ನಾಟಕ ನಗರ ಮತ್ತು ಗ್ರಾಮೀಣ ಪ್ರದೇಶ ಯೋಜನಾ ಅಧಿನಿಯಮ, 1961ಕ್ಕೆ ತಿದ್ದುಪಡಿ.- ಕರ್ನಾಟಕ** ನಗರ ಮತ್ತು ಗ್ರಾಮೀಣ ಪ್ರದೇಶ ಯೋಜನಾ ಅಧಿನಿಯಮ, 1961 (ಕರ್ನಾಟಕ ಅಧಿನಿಯಮ, 1963ರ 11) ರ 81-ಬಿ ಪ್ರಕರಣದ ತರುವಾಯ, ಕೆಳಕಂಡ ಪ್ರಕರಣವನ್ನು ಸೇರಿಸತಕ್ಕದ್ದು, ಎಂದರೆ: -

**"81ಸಿ. ಬೆಂಗಳೂರು ಮಹಾನಗರ ಪ್ರದೇಶದ ಸ್ಥೂಲ ಅಭಿವೃದ್ಧಿ ಯೋಜನೆ ಮತ್ತು ಸಮಗ್ರ ಅಭಿವೃದ್ಧಿ ಯೋಜನೆ.-** ಈ ಅಧಿನಿಯಮದಲ್ಲಿ ಏನೇ ಒಳಗೊಂಡಿದ್ದರೂ ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ 1985ರಲ್ಲಿ ಪರಿಭಾಷಿಸಲಾಗಿರುವಂತೆ ಬೆಂಗಳೂರು ಮಹಾನಗರ ಪ್ರದೇಶದೊಳಗಿನ ಯೋಜನಾ ಪ್ರಾಧಿಕಾರಗಳು 9 ಮತ್ತು 19ನೇ ಪ್ರಕರಣಗಳ ಅಡಿಯಲ್ಲಿ ಕ್ರಮವಾಗಿ ಸ್ಥೂಲ ಅಭಿವೃದ್ಧಿ ಯೋಜನೆಗಳನ್ನು ಮತ್ತು ಸಮಗ್ರ ಅಭಿವೃದ್ಧಿ ಯೋಜನೆಗಳನ್ನು ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಮೂಲಕ ಅನುಮೋದನೆಗಾಗಿ ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು ಮತ್ತು ಸದರಿ ಪ್ರಾಧಿಕಾರವು ಅಂಥ ಸ್ಥೂಲ ಅಭಿವೃದ್ಧಿ ಯೋಜನೆಗಳಿಗೆ ಮತ್ತು ಸಮಗ್ರ ಅಭಿವೃದ್ಧಿ ಯೋಜನೆಗಳಿಗೆ ಸಂಬಂಧಪಟ್ಟಂತೆ ಪಟ್ಟಣ ಯೋಜನಾ ನಿರ್ದೇಶಕರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಪ್ರಕಾರ್ಯಗಳನ್ನು ನಿರ್ವಹಿಸತಕ್ಕದ್ದು. 9 ಮತ್ತು 19ನೇ ಪ್ರಕರಣಗಳ ಉಪಬಂಧಗಳು, ಈ ಪ್ರಕರಣದ ಉದ್ದೇಶಕ್ಕಾಗಿ ಯಥೋಚಿತ ವ್ಯತ್ಯಾಸಗಳೊಂದಿಗೆ ಅನ್ವಯವಾಗತಕ್ಕದ್ದು.

****

**ಅಧಿಸೂಚನೆ**

(See the notification in english)

* * *

**2017ರ ಕರ್ನಾಟಕ ಅಧಿನಿಯಮ ಸಂಖ್ಯೆ: 05**

(2017ರ ಜನವರಿ ತಿಂಗಳ 4ನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ಅಧಿನಿಯಮ, 2016**

(2016ರ ಡಿಸೆಂಬರ್ ತಿಂಗಳ 31ನೇ ದಿನಾಂಕದಂದು ರಾಜ್ಯಪಾಲರಿಂದ ಅನುಮೋದನೆಯನ್ನು ಪಡೆಯಲಾಗಿದೆ)

ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಅಧಿನಿಯಮ, 1985ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

**ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಅಧಿನಿಯಮ, 1985ನ್ನು (1985ರ ಕರ್ನಾಟಕ ಅಧಿನಿಯಮ 39) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;**

ಇದು, ಭಾರತ ಗಣರಾಜ್ಯದ ಅರವತ್ತೇಳನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗತಕ್ಕದ್ದು:–

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.–** (1) ಈ ಅಧಿನಿಯಮವನ್ನು ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ಅಧಿನಿಯಮ, 2016 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

(ಪ್ರಕರಣ 2, 3, 6 ಮತ್ತು 9 ಇವುಗಳನ್ನು ಮೂಲ ಅಧಿನಿಯಮದಲ್ಲಿ ಇಂಧಿಕರಿಸಿದೆ.)